ಭಾನುವಾರ 26.10.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 81
Digital Varthe Kannada Daily
Volume 01 - Issue 81
Sunday
26.10.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ
DIGITAL VARTHE
digitalvarthe@gmail.com
www.digitalvarthe.com

## ಶಾಲೆಗೆ ಹೋದ ವಿದ್ಯಾರ್ಥಿನಿಯರು ನಾಪತ್ತೆ




**ಕೋಲಾರ**: ಜಿಲ್ಲೆಯಲ್ಲಿ ಇಬ್ಬರು ಹತ್ತನೇ ತರಗತಿಯ ವಿದ್ಯಾರ್ಥಿನಿಯರು ಶಾಲೆಗೆ ತೆರಳಿದ ನಂತರ ನಾಪತ್ತೆಯಾಗಿರುವ ಘಟನೆ ಆತಂಕ ಹುಟ್ಟಿಸಿದೆ. ನಿನ್ನೆ ಬೆಳಗ್ಗೆ ಶಾಲೆಗೆಂದು ಮನೆಯಿಂದ ಹೊರಟ ಇಬ್ಬರು ವಿದ್ಯಾರ್ಥಿನಿಯರು ರಾತ್ರಿ ತಡವಾದರೂ ಮನೆಗೆ ಮರಳದೇ ಇರುವುದರಿಂದ ಪೋಷಕರು ಹಾಗೂ ಸ್ಥಳೀಯರು ಆತಂಕಗೊಂಡಿದ್ದಾರೆ. ಈ ಘಟನೆ ಇದೀಗ ಕೋಲಾರದಲ್ಲಿ ಚರ್ಚೆಯ ವಿಷಯವಾಗಿದೆ.

ನಾಪತ್ತೆಯಾದ ವಿದ್ಯಾರ್ಥಿನಿಯರನ್ನು ಶರಣ್ಯ ಮತ್ತು ದೇವಿ ಎಂದು ಗುರುತಿಸಲಾಗಿದೆ. ಇಬ್ಬರೂ ನರಸಾಪುರ ಗ್ರಾಮದ ನಿವಾಸಿಗಳಾಗಿದ್ದು, ಸ್ಥಳೀಯ ಶಾಲೆಯಲ್ಲಿ ಹತ್ತನೇ ತರಗತಿಯಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದರು. ಪ್ರತಿದಿನದಂತೆ ಶುಕ್ರವಾರ ಬೆಳಿಗ್ಗೆ ಇಬ್ಬರೂ ಯೂನಿಫಾರ್ಮ್ ಧರಿಸಿ ಶಾಲೆಗೆ ತೆರಳಿದ್ದರು. ಆದರೆ ಸಂಜೆ ಶಾಲೆ ಮುಗಿದ ಬಳಿಕ ಮನೆಗೆ ಮರಳದೇ ಇರುವುದರಿಂದ ಪೋಷಕರು ಮೊದಲಿಗೆ ಶಾಲೆ ಹಾಗೂ ಸ್ನೇಹಿತರ ಮನೆಗಳಲ್ಲಿ ಹುಡುಕಾಟ ನಡೆಸಿದರು. ಆದರೆ ಯಾರಿಗೂ ಮಕ್ಕಳ ಮಾಹಿತಿ ಲಭ್ಯವಾಗಲಿಲ್ಲ


ಪೋಷಕರು ಇಡೀ ದಿನ ಮಕ್ಕಳಿಗಾಗಿ ಹಾತೊರೆಯುತ್ತಾ ಹುಡುಕಾಟ ನಡೆಸಿದರು. ಆದರೆ ರಾತ್ರಿ ತಡವಾದರೂ ಯಾವುದೇ ಸುಳಿವು ಸಿಕ್ಕಿರಲಿಲ್ಲ. ಇದರಿಂದ ಆತಂಕಗೊಂಡ ಪೋಷಕರು ಕೊನೆಗೆ ಕೋಲಾರ ಮಹಿಳಾ ಪೊಲೀಸ್ ಠಾಣೆಗೆ ದೂರು ಸಲ್ಲಿಸಿದರು. ದೂರು ಸ್ವೀಕರಿಸಿದ ಪೊಲೀಸರು ತಕ್ಷಣವೇ ಪ್ರಕರಣ ದಾಖಲಿಸಿಕೊಂಡು ಹುಡುಕಾಟ ಪ್ರಾರಂಭಿಸಿದ್ದಾರೆ.

ಪೊಲೀಸರು ಇಬ್ಬರು ವಿದ್ಯಾರ್ಥಿನಿಯರ ಸ್ನೇಹಿತರನ್ನು ವಿಚಾರಣೆ ಮಾಡಿದ್ದು, ಶಾಲಾ ವಲಯ ಹಾಗೂ ಬಸ್ ನಿಲ್ದಾಣ ಪ್ರದೇಶಗಳಲ್ಲಿ ಸಿಸಿಟಿವಿ ದೃಶ್ಯಗಳನ್ನು ಸಂಗ್ರಹಿಸುತ್ತಿದ್ದಾರೆ. ವಿದ್ಯಾರ್ಥಿನಿಯರು ಕೊನೆಯಾಗಿ ಶಾಲೆ ಹತ್ತಿರದಲ್ಲೇ ಕಂಡುಬಂದಿದ್ದಾರೆಂಬ ಮಾಹಿತಿ ಲಭ್ಯವಾಗಿದೆ. ಇನ್ನೂ 24 ಗಂಟೆ ಕಳೆದರೂ ಇಬ್ಬರ ಪತ್ತೆಯಿಲ್ಲದಿರುವುದು ಪೋಷಕರ ಆತಂಕವನ್ನು ಹೆಚ್ಚಿಸಿದೆ.

ಈ ಘಟನೆ ಹಿನ್ನೆಲೆಯಲ್ಲಿ ಸ್ಥಳೀಯರು ಸಾಮಾಜಿಕ ಜಾಲತಾಣಗಳ ಮೂಲಕ ಮಕ್ಕಳ ಪತ್ತೆಗೆ ಸಹಾಯ ಮಾಡುವಂತೆ ಮನವಿ ಮಾಡಿದ್ದಾರೆ. ಪೊಲೀಸರು "ಇಬ್ಬರನ್ನು ಸುರಕ್ಷಿತವಾಗಿ ಪತ್ತೆಹಚ್ಚಲು ಎಲ್ಲ ಸಾಧ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ" ಎಂದು ತಿಳಿಸಿದ್ದಾರೆ.

ಕೋಲಾರದಲ್ಲಿ ಇಂತಹ ಕಣ್ಮರೆಯ ಘಟನೆಗಳು ಹೆಚ್ಚುತ್ತಿರುವುದರಿಂದ ಪೋಷಕರು ತಮ್ಮ ಮಕ್ಕಳ ಸುರಕ್ಷತೆಯ ಬಗ್ಗೆ ಹೆಚ್ಚಿನ ಎಚ್ಚರಿಕೆ ವಹಿಸಬೇಕೆಂಬ ಅಭಿಪ್ರಾಯ ಸ್ಥಳೀಯರಲ್ಲಿ ಮೂಡಿದೆ. ಪೊಲೀಸರು ಸಾರ್ವಜನಿಕರಲ್ಲಿ ಯಾವುದೇ ಮಾಹಿತಿ ದೊರೆತರೆ ತಕ್ಷಣ ಠಾಣೆಗೆ ತಿಳಿಸಲು ವಿನಂತಿಸಿದ್ದಾರೆ.

## ಮದುವೆಯಾಗೋಣ ಅಂತ ನಂಬಿಸಿ ರೇಪ್ ಡಿ:ಜೆ ಹಳ್ಳಿ ಇನ್ಸ್‌ಪೆಕ್ಟರ್ ವಿರುದ್ಧ ಎಫ್‌ಐಆರ್



**ಬೆಂಗಳೂರು:** ಮದುವೆಯಾಗ್ತೀನಿ ಅಂತ ನಂಬಿಸಿ, ಲೈಂಗಿಕವಾಗಿ ಬಳಸಿಕೊಂಡು ವಂಚಿಸಿದ್ದ ಡಿಜೆ ಹಳ್ಳಿ ಇನ್ಸ್‌ಪೆಕ್ಟರ್ ಸುನಿಲ್ ವಿರುದ್ಧ ಪೂರ್ವ ವಿಭಾಗದ ಗೋವಿಂದಪುರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಡಿ.ಜೆ ಹಳ್ಳಿ ಇನ್ಸ್‌ಪೆಕ್ಟರ್ ಸುನಿಲ್ ವಿರುದ್ಧ ಮುಸ್ಲಿಂ ಮಹಿಳೆಯೊಬ್ಬರು ದೂರು ನೀಡಿದ್ದರು. ದೂರಿನ ಆಧಾರದ ಮೇಲೆ ಪೂರ್ವ ವಿಭಾಗದ ಗೋವಿಂದಪುರ ಪೊಲೀಸ್ ಠಾಣೆಯಲ್ಲಿ ಬಿಎನ್‌ಎಸ್ 69,75,(1)75(2)351(2) ಕಾಯ್ದೆ ಅಡಿ ಡಿ.ಜೆ ಹಳ್ಳಿ ಇನ್ಸ್‌ಪೆಕ್ಟರ್ ಸುನಿಲ್ ವಿರುದ್ಧ ಪ್ರಕರಣ ದಾಖಲಾಗಿದೆ.

ನಿನ್ನನ್ನು ಮದುವೆಯಾಗ್ತೀನಿ, ಮನೆ ಕೊಡಿಸ್ತಿನಿ, ಬ್ಯೂಟಿ ಪಾರ್ಲರ್ ಓಪನ್ ಮಾಡಿ ಕೊಡ್ತೀನಿ. ನಿನ್ನ ಲೈಫ್ ಸೆಟಲ್ ಮಾಡ್ತೀನಿ ಎಂದು ಹೇಳಿ ಮರುಳು ಮಾಡಿ, ಲೈಂಗಿಕವಾಗಿ ಬಳಸಿಕೊಂಡಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಿದ್ದರು.

ಕಳೆದ ಒಂದು ವರ್ಷದಲ್ಲಿ ಎರಡ್ಮೂರು ಬಾರಿ ಲೈಂಗಿಕವಾಗಿ ಬಳಸಿಕೊಂಡಿದ್ದಾರೆ. ಡಿಜೆ ಹಳ್ಳಿಯ 8ನೇ ಮೈಲಿಯಲ್ಲಿರುವ ತಮ್ಮ ಮನೆ ಮತ್ತು ಹೋಟೆಲ್‌ಗೆ ಕರೆಸಿ ಅತ್ಯಾಚಾರ ಎಸಗಿದ್ದಾರೆ. ಆದ್ರೆ ಇದೀಗ ನಮ್ಮ ವಿಚಾರ ಯಾರಿಗಾದರೂ ಹೇಳಿದ್ರೆ ಕೊಲೆ ಮಾಡುತ್ತೇವೆಂದು ಹೇಳಿ ಬೆದರಿಕೆ ಹಾಕುತ್ತಿದ್ದಾರೆ. ಅಲ್ಲದೇ ನನ್ನ ಖಾಸಗಿ ಫೋಟೋ, ವಿಡಿಯೋ ಇಟ್ಟುಕೊಂಡು ಬೆದರಿಸುತ್ತಿದ್ದಾರೆ ಎಂದು ಆರೋಪಿಸಿದ್ದರು.

ಇನ್ನೂ ಪ್ರತಿಬಾರಿ ವಿಡಿಯೋ ಕಾಲ್ ಮಾಡು ಎಂದು ಪೀಡಿಸುತ್ತಿದ್ದಾರೆ ಎಂದು ಆರೋಪಿಸಿ ಸಂತ್ರಸ್ತ ಮಹಿಳೆ ಡಿಜಿ ಕಚೇರಿಗೆ ದೂರು ನೀಡಿ, ನ್ಯಾಯಾ ಕೊಡಿಸಿ ಎಂದು ಮನವಿಮಾಡಿಕೊಂಡಿದ್ದರು

## ಮಹಾರಾಷ್ಟ್ರ ವೈದ್ಯೆ ಆತ್ಮಹತ್ಯೆ ಕೇಸ್ -ಮಾನಸಿಕವಾಗಿ ಕಿರುಕುಳ ನೀಡಿದ್ದ ಟೆಕ್ಕಿ ಅರೆಸ್ಟ್




ಸತಾರಾದ (Satara) ಉಪಜಿಲ್ಲಾ ಆಸ್ಪತ್ರೆಯಲ್ಲಿ ವೈದ್ಯೆ ಆತ್ಮಹತ್ಯೆ ಮಾಡಿಕೊಂಡ ಪ್ರಕರಣಕ್ಕೆ ಸಂಬಂಧಿಸಿದಂತೆ 5 ತಿಂಗಳಿಂದ ಮಾನಸಿಕವಾಗಿ ಕಿರುಕುಳ ನೀಡಿದ್ದ ಟೆಕ್ಕಿಯೋರ್ವನನ್ನು ಪೊಲೀಸರು ಬಂಧಿಸಿದ್ದಾರೆ.

ಬಂಧಿತ ಆರೋಪಿಯನ್ನು ಪ್ರಶಾಂತ್ ಬಂಕರ್ ಎಂದು ಗುರುತಿಸಲಾಗಿದ್ದು, ಸಾಫ್ಟ್‌ವೇರ್ ಎಂಜಿನಿಯರ್ ಆಗಿದ್ದರು. ಮೃತ ವೈದ್ಯೆ ಆತ್ಮಹತ್ಯೆಗೂ ಮುನ್ನ ತನ್ನ ಅಂಗೈಯಲ್ಲಿ, 5 ತಿಂಗಳಿನಿಂದ ಟೆಕ್ಕಿ ಮಾನಸಿಕವಾಗಿ ಕಿರುಕುಳ ನೀಡಿದ್ದಾರೆ ಎಂದು ಬರೆದುಕೊಂಡಿದ್ದರು. ಇನ್ನೂ ವೈದ್ಯೆಯ ಮೇಲೆ ಹಲವು ಬಾರಿ ಅತ್ಯಾಚಾರ ಮತ್ತು ಕಿರುಕುಳ ನೀಡಿದ್ದ ಆರೋಪ ಹೊತ್ತಿದ್ದ ಪೊಲೀಸ್ ಇನ್ಸ್‌ಪೆಕ್ಟರ್ ಗೋಪಾಲ್ ಬದ್ನೆ ತಲೆಮರೆಸಿಕೊಂಡಿದ್ದಾನೆ. ಈತನನ್ನು ಬಂಧಿಸಲು ಸತಾರ ಪೊಲೀಸರು ನಾಲ್ಕು ತಂಡಗಳನ್ನು ರಚಿಸಿದ್ದಾರೆ.

ಈ ನಡುವೆ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರು ಸತಾರಾ ಪೊಲೀಸ್ ವರಿಷ್ಠಾಧಿಕಾರಿ ತುಷಾರ್ ಅವರೊಂದಿಗೆ ಮಾತನಾಡಿ, ಆತ್ಮಹತ್ಯೆ ಪತ್ರದಲ್ಲಿ ಹೆಸರಿಸಲಾದ ಪೊಲೀಸ್ ಇನ್ಸ್‌ಪೆಕ್ಟರ್ ಅವರನ್ನು ಅಮಾನತುಗೊಳಿಸಲು ಆದೇಶಿಸಿದ್ದಾರೆ. ಇಬ್ಬರೂ ಆರೋಪಿಗಳ ವಿರುದ್ಧ ಅತ್ಯಾಚಾರ ಮತ್ತು ಆತ್ಮಹತ್ಯೆಗೆ ಪ್ರಚೋದನೆಯ ವಿಭಾಗಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಎಸ್‌ಪಿ ತುಷಾರ್ ಸಿಎಂಗೆ ತಿಳಿಸಿದ್ದಾರೆ.

ಸತಾರಾದ ಉಪ ಜಿಲ್ಲಾಸ್ಪತ್ರೆಯಲ್ಲಿ ವೈದ್ಯೆಯೊಬ್ಬರು ಆತ್ಮಹತ್ಯೆ ಮಾಡಿಕೊಂಡಿದ್ದರು. ಫಾಲ್ಟನ್ ಉಪ ಜಿಲ್ಲಾ ಆಸ್ಪತ್ರೆಯಲ್ಲಿ ವೈದ್ಯೆ ತಮ್ಮ ಅಂಗೈಯಲ್ಲಿ ತಮಗಾದ ಕಿರುಕುಳದ ಬಗ್ಗೆ ಬರೆದುಕೊಂಡಿದ್ದಾರೆ. ಎಸ್‌ಐ ಗೋಪಾಲ್ ಬದ್ನೆ ಹಾಗೂ ಟೆಕ್ಕಿ ಪ್ರಶಾಂತ್ ಬಂಕರ್‌ನಿಂದ ತನಗೆ ಮಾನಸಿಕ ಮತ್ತು ದೈಹಿಕ ಕಿರುಕುಳ ನೀಡಿದ್ದಾರೆ. ಹೀಗಾಗಿ ಪೊಲೀಸರ ನಿರಂತರ ಕಿರುಕುಳದಿಂದ ಆತ್ಮಹತ್ಯೆ ಮಾಡಿಕೊಳ್ತಿದ್ದೇನೆ ಎಂದು ಉಲ್ಲೇಖಿಸಿದ್ದರು.

ಪ್ರಾಥಮಿಕ ಮಾಹಿತಿಯ ಪ್ರಕಾರ, ಮೃತ ವೈದ್ಯೆ ಕಳೆದ ಕೆಲ ತಿಂಗಳಿನಿಂದ ಪೊಲೀಸರು ಮತ್ತು ಆರೋಗ್ಯ ಇಲಾಖೆಯ ನಡುವಿನ ವಿವಾದದಲ್ಲಿ ಸಿಲುಕಿದ್ದರು. ಇದರಿಂದ ವೈದ್ಯೆ ವಿರುದ್ಧ ಇಲಾಖಾ ಹಂತದ ವಿಚಾರಣೆ ಕೂಡ ಆರಂಭಿಸಲಾಗಿತ್ತು. ಈ ಮಧ್ಯೆ ಸಂತ್ರಸ್ತೆ ತಮ್ಮ ಹಿರಿಯ ಅಧಿಕಾರಿಯನ್ನ ಸಂಪರ್ಕಿಸಿ, ತನ್ನ ಮೇಲೆ ಅನ್ಯಾಯವಾಗುತ್ತಿದೆ. ಈ ದೌರ್ಜನ್ಯ ನಿಲ್ಲಿಸದಿದ್ದರೆ ಆತ್ಮಹತ್ಯೆ ಮಾಡಿಕೊಳ್ಳುವುದಾಗಿ ಹೇಳಿದ್ದರು. ಆದಾಗ್ಯೂ ಕಿರುಕುಳ ಮುಂದುವರಿದ ಹಿನ್ನೆಲೆ ಅಂಗೈನಲ್ಲಿ ಪತ್ರ ಬರೆದು ಆತ್ಮಹತ್ಯೆ ಮಾಡಿಕೊಂಡಿದ್ದರು.

ತನ್ನ ಅಂಗೈಯಲ್ಲಿರುವ ಡೆತ್‌ನೋಟ್ ಅಲ್ಲದೇ, ಸಂತ್ರಸ್ತೆ ಕಳೆದ ಜೂನ್ 19 ರಂದೇ ಫಾಲ್ಟನ್ ಉಪ-ವಿಭಾಗೀಯ ಕಚೇರಿಯ ಡಿಎಸ್ಪಿಗೆ ಬರೆದ ಪತ್ರದಲ್ಲೂ ಇದೇ ರೀತಿಯ ಆರೋಪಗಳನ್ನ ಮಾಡಿದ್ದರಂತೆ. ಫಾಲ್ಟನ್ ಗ್ರಾಮೀಣ ಪೊಲೀಸ್ ಇಲಾಖೆಯ ಎಸ್‌ಐ ಗೋಪಾಲ್ ಬದ್ನೆ, ಉಪ-ವಿಭಾಗೀಯ ಪೊಲೀಸ್ ಇನ್ಸ್‌ಪೆಕ್ಟರ್ ಪಾಟೀಲ್ ಮತ್ತು ಸಹಾಯಕ ಪೊಲೀಸ್ ಇನ್ಸ್‌ಪೆಕ್ಟರ್ ಲಾಡ್‌ಪುತ್ರೆ ವಿರುದ್ಧ ಕಿರುಕುಳದ ಆರೋಪ ಹೊರಿಸಿ ಕಾನೂನು ಕ್ರಮಕ್ಕೆ ಮನವಿ ಮಾಡಿದ್ದರು ಎಂದು ವರದಿಯಾಗಿದೆ.

ನನ್ನ ಸಾವಿಗೆ ಪೊಲೀಸ್ ಇನ್ಸ್‌ಪೆಕ್ಟರ್ ಗೋಪಾಲ್ ಬದ್ನೆ ಸೇರಿ ಮೂವರು ಕಾರಣ. ಗೋಪಾಲ್ ಬದ್ನೆ ನನ್ನ ಮೇಲೆ ನಾಲ್ಕು ಬಾರಿ ಅತ್ಯಾಚಾರ ಮಾಡಿದ್ದಾರೆ. 5 ತಿಂಗಳಿಗೂ ಹೆಚ್ಚು ಕಾಲ ಮಾನಸಿಕ, ದೈಹಿಕ ಕಿರುಕುಳ ನೀಡಿದ್ದಾರೆ' ಅಂತ ಆರೋಪಿಸಿದ್ದಾರೆ

## ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿ.ಸಿ. ಟ್ರಸ್ಟ್ ಕಾರ್ಯ ಕ್ಷೇತ್ರದಲ್ಲಿ ಒಕ್ಕೂಟ ಪದಾಧಿಕಾರಿಗಳ ತರಬೇತಿ ಕಾರ್ಯಾಗಾರ



ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿ.ಸಿ. ಟ್ರಸ್ಟ್ (ರಿ) ಕಿಕ್ಕೇರಿ ವತಿಯಿಂದ ಕಸಬಾ ವಲಯದ ಮಡುವಿನ ಕೋಡಿ ಕಾರ್ಯಕ್ಷೇತ್ರ.ದಲ್ಲಿ ಒಕ್ಕೂಟ ಪದಾಧಿಕಾರಿಗಳ ತರಬೇತಿ ಕಾರ್ಯಾಗಾರ ಆಯೋಜಿಸಲಾಯಿತು.

ಕಾರ್ಯಕ್ರಮಕ್ಕೆ ಮಾನ್ಯ ಜಿಲ್ಲಾ ನಿರ್ದೇಶಕರಾದ ಯೋಗೇಶ್ ಅವರು ದೀಪ ಉದ್ಘಾಟನೆ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಉದ್ದೇಶಗಳು, ಕಾರ್ಯಕ್ರಮಗಳು, ಸಮುದಾಯ ಅಭಿವೃದ್ಧಿ, ಸ್ವಸಹಾಯ ಸಂಘಗಳ ಪಾತ್ರ, ಕೃಷಿ ಅಭಿವೃದ್ಧಿ, ಮಾನವ ಸಂಪನ್ಮೂಲ ಅಭಿವೃದ್ಧಿ, ಪ್ರಗತಿ ನಿಧಿ, ಜನಜಾಗೃತಿ, ನಮ್ಮೂರು ನಮ್ಮ ಕೆರೆ, ಜ್ಞಾನದೀಪ ಶಾಲಾ ಶಿಕ್ಷಣ, ಸುಜ್ಞಾನ ನಿಧಿ, ಶಿಷ್ಯವೇತನ ಯೋಜನೆ, ಶ್ರದ್ಧಾ ಕೇಂದ್ರಗಳ ಸ್ವಚ್ಛತಾ ಕಾರ್ಯಕ್ರಮ ಮೊದಲಾದ ವಿವಿಧ ಯೋಜನೆಗಳ ಕುರಿತು ಸವಿಸ್ತಾರವಾದ ಮಾಹಿತಿ ನೀಡಿದರು. ಮುಖ್ಯವಾಗಿ ಒಕ್ಕೂಟದ ಪದಾಧಿಕಾರಿಗಳು ತಮ್ಮ ಜವಾಬ್ದಾರಿಯನ್ನು ಹೇಗೆ ಸಮರ್ಪಕವಾಗಿ ನಿರ್ವಹಿಸಬೇಕು ಎಂಬುದರ ಕುರಿತು ಮಾರ್ಗದರ್ಶನ ನೀಡಿದರು.

ಯೋಜನಾಧಿಕಾರಿಯಾದ ಪ್ರಸಾದ್ ಅವರು ಪ್ರಗತಿ ರಕ್ಷಾ ಕವಚ, ಬಡ್ಡಿದರ, ವಾರದ ಸಭೆ, ಒಕ್ಕೂಟ ಸಭೆ, ಮರುಪಾವತಿ ಚೀಟಿ ಅನುಷ್ಠಾನ, ಆರೋಗ್ಯ ರಕ್ಷಾ ಹಾಗೂ ಸಂಪೂರ್ಣ ಸುರಕ್ಷಾ ವಿಮಾ ಕಾರ್ಯಕ್ರಮಗಳ ಬಗ್ಗೆ ಮಾಹಿತಿಯನ್ನು ನೀಡಿದರು. ಕಾರ್ಯಕ್ರಮದಲ್ಲಿ ವಲಯ ಮೇಲ್ವಿಚಾರಕಿ ಗುಣಶ್ರೀ, ಸೇವಾ ಪ್ರತಿನಿಧಿಗಳಾದ ಅನಿತಾ, ಉಮಾ, ಶ್ವೇತಾ, ನೇತ್ರವತಿ, ಶಶಿಕಲಾ, ಸುನಿತಾ ಹಾಗೂ ಒಕ್ಕೂಟ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಹಾಡಹಗಲೇ ಪತ್ನಿ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿದ ಪತಿ



**ನೆಲಮಂಗಲ:** ರಸ್ತೆ ಗುಂಡಿಯಿಂದ ಮತ್ತೊಮ್ಮೆ ಮಾನವ ಜೀವ ಕಳೆದುಹೋಗಿದೆ. ನೆಲಮಂಗಲದ ಹೊರವಲಯದಲ್ಲಿ ನಡೆದ ದುರ್ಘಟನೆಯಲ್ಲಿ ಯುವ ಟೆಕ್ಕಿಯೊಬ್ಬರು ಪ್ರಾಣ ಕಳೆದುಕೊಂಡಿದ್ದಾರೆ. ರಸ್ತೆ ನಿರ್ವಹಣೆಯ ನಿರ್ಲಕ್ಷ್ಯವೇ ಈ ದುರಂತಕ್ಕೆ ಕಾರಣವಾಗಿದೆ ಎಂಬ ಆರೋಪ ಸ್ಥಳೀಯರಿಂದ ಕೇಳಿಬಂದಿದೆ.

ಘಟನೆ ಮಾದನಾಯಕನಹಳ್ಳಿ ಹುಸ್ಕೂರು ಎಪಿಎಂಸಿ ರಸ್ತೆಯ ಬಳಿ ನಡೆದಿದೆ. ಮೃತ ಯುವತಿಯನ್ನು ಪ್ರಿಯಾಂಕ (26) ಎಂದು ಗುರುತಿಸಲಾಗಿದೆ. ಅವರು ಖಾಸಗಿ ಐಟಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದು, ತಮ್ಮ ಅಣ್ಣನ ಜೊತೆ ಬೈಕ್‌ನಲ್ಲಿ ಎಪಿಎಂಸಿ ಹುಸ್ಕೂರು ರಸ್ತೆ ಮೂಲಕ ಮಾದಾವರದ ಕಡೆಗೆ ತೆರಳುತ್ತಿದ್ದರು.

ಘಟನೆಯ ಸಮಯದಲ್ಲಿ ರಸ್ತೆ ಕಾಮಗಾರಿಯಿಂದಾಗಿ ಮಾರ್ಗದ ಮೇಲೆ ಹಲವು ಗುಂಡಿಗಳು ಇದ್ದವು ಎಂದು ಸಾಕ್ಷಿಗಳು ತಿಳಿಸಿದ್ದಾರೆ. ಬೈಕ್ ಸಾಗಿಸುತ್ತಿದ್ದ ಪ್ರಿಯಾಂಕನ ಅಣ್ಣ, ಒಂದು ದೊಡ್ಡ ಗುಂಡಿಯನ್ನು ತಪ್ಪಿಸಲು ಪ್ರಯತ್ನಿಸಿದ ವೇಳೆ ವಾಹನ ಅಸ್ಥಿರಗೊಂಡಿದೆ. ಈ ಅಕಸ್ಮಿಕದಲ್ಲೇ ಬೈಕ್‌ನ ಹಿಂಬದಿಯಲ್ಲಿ ಕುಳಿತಿದ್ದ ಪ್ರಿಯಾಂಕ ಸಮತೋಲನ ಕಳೆದುಕೊಂಡು ರಸ್ತೆ ಬದಿಗೆ ಬಿದ್ದಿದ್ದಾರೆ. ಇದೇ ವೇಳೆ ಹಿಂದಿನಿಂದ ವೇಗವಾಗಿ ಬರುತ್ತಿದ್ದ ಲಾರಿ ಅವರ ಮೇಲೆ ಹರಿದಿದೆ. ಪ್ರಿಯಾಂಕ ತೀವ್ರ ಗಾಯಗೊಂಡು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಸ್ಥಳೀಯರು ಈ ರಸ್ತೆಯ ದುಸ್ಥಿತಿ ಕುರಿತು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಹಲವು ದಿನಗಳಿಂದ ಕಾಮಗಾರಿ ನಡೆಯುತ್ತಿದ್ದರೂ, ಮಾರ್ಗ ಸರಿಪಡಿಸದ ಕಾರಣ ವಾಹನ ಸವಾರರಿಗೆ ಅಪಾಯ ಉಂಟಾಗಿದೆ ಎಂದು ಅವರು ಆರೋಪಿಸಿದ್ದಾರೆ. "ರಸ್ತೆ ಗುಂಡಿ ತಪ್ಪಿಸಲು ಹೋಗಿ ಯುವತಿಯ ಜೀವ ಹೋದದ್ದು ಸರ್ಕಾರದ ನಿರ್ಲಕ್ಷ್ಯದ ಫಲ" ಎಂದು ಸ್ಥಳೀಯರು ಹೇಳಿದ್ದಾರೆ.

ಈ ಘಟನೆ ರಸ್ತೆ ಗುಣಮಟ್ಟ, ಕಾಮಗಾರಿ ನಿರ್ವಹಣೆ ಹಾಗೂ ಸಾರ್ವಜನಿಕ ಸುರಕ್ಷತೆಯ ಕುರಿತಾದ ಪ್ರಶ್ನೆಗಳನ್ನು ಮತ್ತೊಮ್ಮೆ ಎಬ್ಬಿಸಿದೆ.

**ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:**
**9538786812 / 9880655634**

## ಮಹಿಳೆ ತಲೆ ಕೂದಲು ಕತ್ತರಿಸಿ, ಖಾರದ ಪುಡಿ ಹಚ್ಚಿ ದೌರ್ಜನ್ಯ



**ಯಾದಗಿರಿ:** ಜಿಲ್ಲೆಯಲ್ಲಿ ಇಡೀ ನಾಗರಿಕ ಸಮಾಜವೇ ತಲೆ ತಗ್ಗಿಸುವಂತಹ ಘಟನೆಯೊಂದು ನಡೆದಿದೆ. ಶಹಾಪುರ ತಾಲ್ಲೂಕಿನ ಚಾಮನಾಳ ತಾಂಡಾದಲ್ಲಿ ಮಹಿಳೆಯೊಬ್ಬರ ತಲೆ ಕೂದಲು ಕತ್ತರಿಸಿ, ಸುಣ್ಣ ಹಚ್ಚಿ, ಖಾರದ ಪುಡಿ ಎರಚಿ ಅಮಾನುಷವಾಗಿ ವರ್ತಿಸಿದ ಘಟನೆ ನಡೆದಿದೆ. ಪ್ರಕರಣ ಸಂಬಂಧ ಇಬ್ಬರನ್ನ ಬಂಧಿಸಲಾಗಿದ್ದು, 11 ಜನರ ವಿರುದ್ಧ ಕೆಂಭಾವಿ ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲಿಸಲಾಗಿದೆ.

ಅ.16 ರಂದು ಘಟನೆ ನಡೆದಿದ್ದು ತಡವಾಗಿ ಬೆಳಕಿಗೆ ಬಂದಿದೆ. ಕಸ್ತೂರಿಬಾಯಿ ಡಾಕಪ್ಪ ಮತ್ತು ಡಾಕಪ್ಪ ಚಿನ್ನಾರಾಠೋಡ ಬಂಧಿತ ಆರೋಪಿಗಳು. ಇನ್ನುಳಿದಂತೆ ವಿಜಯಕುಮಾರ ಕಿಶನ್ ರಾಠೋಡ (ರೌಡಿ ಶೀಟರ್) ಮತ್ತು ಇತರೆ ಹತ್ತು ಮಂದಿ ಆರೋಪಿಗಳು ತಮ್ಮ ಮೊಬೈಲ್ ಫೋನ್‌ಗಳನ್ನು ಸ್ವಿಚ್ ಆಫ್ ಮಾಡಿದ್ದು, ಮುಂಬೈ, ಪುಣೆಯಲ್ಲಿ ತಲೆ ಮರೆಸಿಕೊಂಡಿರುವ ಶಂಕೆ ಇದೆ ಎಂದು ಎಂದು ಪೊಲೀಸರು ತಿಳಿಸಿದ್ದಾರೆ.

ಸಂತ್ರಸ್ತೆ ಆರೋಗ್ಯ ಸಮಸ್ಯೆಯಿಂದಾಗಿ ಕಲಬುರಗಿ ಇರುವ ಚಿಕ್ಕಮ್ಮನ ಮನೆಗೆ ಆಗಾಗ ಹೋಗುತ್ತಿದ್ದಳು. ಆಕೆಯ ಅಳಿಯ ಆಸ್ಪತ್ರೆಗೆ ಕರೆದುಕೊಂಡು ಹೋಗುತ್ತಿದ್ದ. ಆದ್ರೆ, ಆರೋಪಿಗಳು ಅಳಿಯನ ಜೊತೆಗೆ ಸಂಬಂಧ ಇಟ್ಟುಕೊಂಡು ಓಡಿ ಹೋಗಿ ಮರ್ಯಾದೆ ತೆಗೆದಿದ್ದೀಯಾ ಅಂತ ನಿಂದಿಸಿ ಮನಸೋಇಚ್ಛೆ ಥಳಿಸಿದ್ದಾರೆ. ಸುಮಾರು 11 ಜನ ಗಂಗೂಭಾಯಿಯನ್ನ ಒದ್ದು ನೆಲಕ್ಕೆ ಕೆಡವಿದ್ದಾರೆ. ಆಕೆಯನ್ನ ಹಿಡಿದು ತಲೆಕೂದಲು ಕತ್ತರಿಸಿದ್ದಾರೆ. ನಂತರ ತಲೆಗೆ ಸುಣ್ಣ ಹಚ್ಚಿ, ಮೈಮೇಲೆ ಕಾರದಪುಡಿ ಹಾಕಿ ದುಷ್ಕೃತ್ಯ ಎಸಗಿದ್ದಾರೆ. ಜೊತೆಗೆ ಜೀವ ಬೆದರಿಕೆ ಹಾಕಲಾಗಿದೆ ಎಂಬ ಆರೋಪ ಕೂಡ ಕೇಳಿಬಂದಿದೆ.

ಘಟನೆ ಸಂಬಂಧ ಕೆಂಭಾವಿ ಪೋಲಿಸ್ ಠಾಣೆಯಲ್ಲಿ 11 ಜನರ ವಿರುದ್ಧ ಕೇಸ್ ದಾಖಲಾಗಿದ್ದು, ಕಸ್ತೂರಿಭಾಯಿ, ಡಾಕಪ್ಪ ಇಬ್ಬರನ್ನ ಬಂಧಿಸಲಾಗಿದೆ. ಇನ್ನುಳಿದ ವಿಜಯಕುಮಾರ್, ತಿಪ್ಪಣ್ಣ, ರಮೇಶ, ದೇವಿಭಾಯಿ, ತಿಪ್ಪಿಭಾಯಿ, ರೂಪ್ಲಿಭಾಯಿ, ಅನುಸೂಯಾ, ಚಾವಳಿಭಾಯಿ, ತಿಪ್ಪಣ್ಣ ನಾಯ್ಕ್ ಆರೋಪಿಗಳಿಗಾಗಿ ಕೆಂಭಾವಿ ಪೊಲೀಸರು ತೀವ್ರ ಹುಡುಕಾಟ ನಡೆಸುತ್ತಿದ್ದಾರೆ.

## ಚಾಲಕನ ನಿಯಂತ್ರಣ ತಪ್ಪಿ 5 ಜನರ ಮೇಲೆ ಹರಿದ ಕಾರು



**ಆಗ್ರಾ:** ವೇಗವಾಗಿ ಬಂದ ಕಾರೊಂದು ಡಿಕ್ಕಿ ಹೊಡೆದ ಪರಿಣಾಮ ಸ್ಥಳದಲ್ಲೇ ಐವರು ಸಾವನ್ನಪ್ಪಿದ್ದು, ಮೂರು ಜನ ಗಾಯಗೊಂಡಿದ್ದಾರೆ. ಈ ಘಟನೆ ಶುಕ್ರವಾರ ರಾತ್ರಿ ಉತ್ತರ ಪ್ರದೇಶದ ಆಗ್ರಾದ ನಾಗ್ಲಾ ಬುಧಿ ಪ್ರದೇಶದ ಬಳಿ ನಡೆದಿದೆ.

ಪೊಲೀಸ್ ಅಧಿಕಾರಿಗಳು ತಿಳಿಸಿರುವಂತೆ ಟಾಟಾ ನೆಕ್ಸಾನ್ ಕಾರು ಮೊದಲು ಬೈಕ್‌ಗೆ ಡಿಕ್ಕಿ ಹೊಡೆದು ನಂತರ ಡಿವೈಡರ್‌ಗೆ ಡಿಕ್ಕಿ ಹೊಡದು ರಸ್ತೆ ಪಕ್ಕಾದಲ್ಲಿ ನಿಂತಿದ್ದ ಜನರಿಗೆ ಡಿಕ್ಕಿ ಹೊಡೆದಿದೆ. ನಂತರ ಚಾಲಕನ ನಿಯಂತ್ರಣ ತಪ್ಪಿ ಗೋಡೆಗೆ ಡಿಕ್ಕಿ ಹೊಡೆದಿದೆ. ಈ ಅಪಘಾತದಲ್ಲಿ ಕಾರು ಸಂಪೂರ್ಣ ನಜ್ಜುಗುಜ್ಜಾಗಿದೆ ಎಂದು ಹೇಳಿದ್ದಾರೆ.

ಮೃತರನ್ನು ಬಬ್ಲಿ (33), ಭಾನು ಪ್ರತಾಪ್ (25), ಕಮಲ್ (23), ಕೃಷ್ಣ (20) ಮತ್ತು ಬಂಟೇಶ್ (21) ಎಂದು ಗುರುತಿಸಲಾಗಿದೆ . ಗಾಯಾಳುಗಳನ್ನು ಹತ್ತಿರದ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರಿಗೆ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಪೊಲೀಸರು ಹೇಳಿದ್ದಾರೆ. ಪ್ರತ್ಯಕ್ಷದರ್ಶಿಯೊಬ್ಬರು ಘಟನೆಯ ಬಗ್ಗೆ ವಿವರಿಸಿದ್ದಾರೆ. ತಮ್ಮ ಅಂಗಡಿಯಲ್ಲಿ ಕುಳಿತಿದ್ದಾಗ ವೇಗವಾಗಿ ಬರುತ್ತಿದ್ದ ಕಾರನ್ನು ನೋಡಿದೆ. ನಂತರ ಒಂದು ದೊಡ್ಡ ಶಬ್ದ ಬಂತು. ಹತ್ತಿರ ಹೋಗಿ ನೋಡಿದಾಗ ಕಾರಿನ ಕೆಳಗೆ ಹಲವಾರು ಜನರು ಸಿಲುಕಿಕೊಂಡಿದ್ದಾರೆ ಎಂದು ಹೇಳಿದ್ದಾರೆ.

ಇನ್ನು ಕಾರಿನ ಕೆಳಗೆ ಸಿಲುಕಿಕೊಂಡಿದ ಜನರನ್ನು ಹೊರತೆಗೆದು, ಹಾಗೂ ಗಾಯಗಳ ಸ್ಥಿತಿ ಗಂಭೀರವಾಗಿದ್ದು, ಅವರನ್ನು ಆಸ್ಪತ್ರೆಗೆ ಕೆರದುಕೊಂಡು ಹೋಗಲಾಗಿದೆ. ಅಪಘಾತಕ್ಕೆ ಕಾರಣನಾಗಿದ್ದ ಕಾರು ಚಾಲಕನ್ನು ಪೊಲೀಸರು ಬಂಧಿಸಲು ಸ್ಥಳಕ್ಕೆ ಬಂದಿದ್ದಾರೆ. ಈ ವೇಳೆ ಅಲ್ಲಿದ್ದ ಕೆಲವು ಜನ ಚಾಲಕನಿಗೆ ಥಳಿಸಿದ್ದಾರೆ. ಅಲ್ಲಿಯ ಜನ ಹೇಳುವ ಪ್ರಕಾರ ಕಾರು ಚಾಲಕ ವಿಪರೀತ ಕುಡಿದ್ದ ಎಂದು ಹೇಳಿದ್ದಾರೆ. ಆದರೆ ಈ ಬಗ್ಗೆ ಪೊಲೀಸರು ತನಿಖೆಯನ್ನು ನಡೆಸುತ್ತಿದ್ದಾರೆ.

## ಸಿಎಂ ಅವ್ರೇ ನಿಮ್ಮ ಇಲಾಖೆಯಲ್ಲಿ ಭ್ರಷ್ಟಾಚಾರ ಹೆಚ್ಚಾಗಿದೆ



**ಬೆಂಗಳೂರು:** ಮುಖ್ಯಮಂತ್ರಿಗಳೇ ನಿಮ್ಮ ಇಲಾಖೆಗಳಲ್ಲಿ ಭ್ರಷ್ಟಾಚಾರ ತೀರಾ ಹೆಚ್ಚಾಗಿದೆ. ಒಂದೊಂದು ಇಲಾಖೆಗಳೂ ರೇಟ್ ಕಾರ್ಡ್ ಇಟ್ಟುಕೊಂಡಿವೆ ಎಂದು ಉದ್ಯಮಿ ಮೋಹನ್ ದಾಸ್ ಪೈ ಎಕ್ಸ್ ಪೋಸ್ಟ್ ಮೂಲಕ ಬೇಸರ ಹೊರಹಾಕಿದ್ದಾರೆ

ಕೈಗಾರಿಕೆ ಅನುಮೋದನೆಗೆ ಕಾಲಮಿತಿ, ಹೂಡಿಕೆದಾರರಿಗೆ ಸಮಸ್ಯೆ ತಪ್ಪಿಸಲು ಏಕಗವಾಕ್ಷಿ ಯೋಜನೆಯಡಿ ಅನುಮೋದನೆಗೆ ರಾಜ್ಯ ಸರ್ಕಾರ ಪ್ಲ್ಯಾನ್ ಮಾಡಿದೆ. ಅದಕ್ಕಾಗಿ ನೆರೆಯ ರಾಜ್ಯಗಳಲ್ಲಿ ಅನುಮೋದನೆ ಸಿಗುತ್ತಿರುವ ಬಗ್ಗೆ ಅಧ್ಯಯನಕ್ಕೆ ನಿರ್ಧರಿಸಲಾಗಿದೆ. ರಾಜ್ಯ ಸರ್ಕಾರದ ಈ ನಿರ್ಧಾರವನ್ನು ಸ್ವಾಗತಿಸಿರುವ ಉದ್ಯಮಿ ಪೈ ಸಲಹೆಯನ್ನೂ ನೀಡಿದ್ದಾರೆ

ಮುಖ್ಯಮಂತ್ರಿಗಳೇ ನಿಮ್ಮ ಯೋಚನೆಗೆ ಧನ್ಯವಾದಗಳು. ಆದ್ರೆ ಅಧಿಕಾರಿಗಳು ಸಹ ನಂತರ ಅನುಮೋದನೆ ನೀಡಬೇಕಾಗಿರೋದ್ರಿಂದ ಏಕಗವಾಕ್ಷಿ ಯೋಜನೆ ಕಾರ್ಯನಿರ್ವಹಿಸಲು ಸಾಧ್ಯವಿಲ್ಲ. ಏಕೆಂದ್ರೆ ಇಲಾಖೆಗಳಲ್ಲಿ ಭ್ರಷ್ಟಾಚಾರ ತೀರಾ ಹೆಚ್ಚಾಗಿದೆ. ಒಂದೊಂದು ಇಲಾಖೆಯಲ್ಲಿಯೂ ರೇಟ್ ಕಾರ್ಡ್ ಇಟ್ಟುಕೊಂಡಿದ್ದಾರೆ. ಆದ್ದರಿಂದ ದಯವಿಟ್ಟು ಆಂಧ್ರಪ್ರದೇಶದ ಮಾದರಿಯಲ್ಲಿ ಸೆಲ್ಫ್ ಸರ್ಟಿಫಿಕೇಟ್ ಸಿಗುವಂತೆ (ಸ್ವಯಂ ಪ್ರಮಾಣೀಕರಣಗಳ ಮೇಲೆ ಅನುಮೋದನೆಯನ್ನು ಸ್ವಯಂಚಾಲಿತವಾಗಿ ಮಾಡಿ) ಕೈಗಾರಿಕೆಗಳ ಸ್ಥಾಪನೆಗೆ ಯೋಜನೆ ರೂಪಿಸಿ ಅಂತ ಮನವಿ ಮಾಡಿದ್ದಾರೆ.

**ಏಕಗವಾಕ್ಷಿ ಯೋಜನೆ ಅಂದ್ರೆ ಏನು?**

ಏಕಗವಾಕ್ಷಿ ಯೋಜನೆ ಎಂದರೆ ಉದ್ಯಮಗಳು ಅಥವಾ ಇತರ ಸೇವೆಗಳನ್ನು ಪ್ರಾರಂಭಿಸಲು ಅಗತ್ಯವಿರುವ ಎಲ್ಲಾ ಅನುಮೋದನೆಗಳು ಮತ್ತು ನೋಂದಣಿಯನ್ನು ಒಂದೇ ಸ್ಥಳದಲ್ಲಿ ಅಥವಾ ಒಂದೇ ಪೋರ್ಟಲ್ ಮೂಲಕ ಒದಗಿಸುವ ವ್ಯವಸ್ಥೆಯಾಗಿದೆ.

## ಹರಿಹರಪುರ ಶಿವಕುಮಾರ್ ಅನಾರೋಗ್ಯದಿಂದ ನಿಧನ ಹೊಂದಿದ್ದಾರೆ.



**ಚನ್ನಪಟ್ಟಣ:** ಸರಳ ಸಜ್ಜನಿಕೆಗೆ ಹೆಸರಾಗಿದ್ದ ಹಾಗೂ ಸಮಾಜಮುಖಿ ಚಟುವಟಿಕೆಗಳಲ್ಲಿ ತೊಡಗಿಕೊಂಡಿದ್ದ ಶಿವಕುಮಾರ್ ಅವರ ನಿಧನದಿಂದ ಪ್ರದೇಶದಲ್ಲಿ ಶೋಕದ ಛಾಯೆ ಆವರಿಸಿದೆ. ರಾಜಕೀಯವಾಗಿ ಸಕ್ರಿಯರಾಗಿದ್ದ ಅವರು 2004ರ ವಿಧಾನಸಭಾ ಚುನಾವಣೆಯಲ್ಲಿ ಬಹುಜನ ಸಮಾಜ ಪಕ್ಷದ (BSP) ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದರು. ನಿಸ್ವಾರ್ಥ ಸೇವೆ, ಸರಳತೆ ಮತ್ತು ಸಾಮಾನ್ಯರ ಪರ ಹೋರಾಟಕ್ಕಾಗಿ ಅವರು ಜನಮನಗಳಲ್ಲಿ ಅಚ್ಚಳಿಯದ ಗುರುತು ಬಿಟ್ಟಿದ್ದರು.

ಮೃತರು ಪತ್ನಿ, ಇಬ್ಬರು ಪುತ್ರರು, ಒಬ್ಬ ಪುತ್ರಿ ಹಾಗೂ ಅಪಾರ ಬಂಧುಬಳಗವನ್ನು ಅಗಲಿದ್ದಾರೆ. ಕುಟುಂಬದ ಮೂಲಗಳ ಪ್ರಕಾರ, ಅಂತ್ಯಕ್ರಿಯೆ ನಾಳೆ ಮಧ್ಯಾಹ್ನ 12 ಗಂಟೆಗೆ ಸ್ವಂತ ಜಮೀನಿನಲ್ಲಿ ನೆರವೇರಲಿದೆ. ಈ ಕುರಿತು ಕುಟುಂಬದ ಸದಸ್ಯರು ಅಧಿಕೃತ ಮಾಹಿತಿ ನೀಡಿದ್ದಾರೆ.

ಶಿವಕುಮಾರ್ ಅವರ ನಿಧನದ ಸುದ್ದಿ ತಿಳಿದು ರಾಜಕೀಯ ಹಾಗೂ ಸಾಮಾಜಿಕ ವಲಯದಲ್ಲಿ ತೀವ್ರ ದುಃಖ ವ್ಯಕ್ತವಾಗಿದೆ. ವಿವಿಧ ಪಕ್ಷಗಳ ನಾಯಕರು ಹಾಗೂ ಗಣ್ಯರು ಅವರ ಮನೆಗೆ ಭೇಟಿ ನೀಡಿ ಶೋಕಸಂತಾಪ ಸೂಚಿಸಿದ್ದಾರೆ.

ಬಹುಜನ ಸಮಾಜ ಪಕ್ಷದ ರಾಜ್ಯಾಧ್ಯಕ್ಷ ಕೃಷ್ಣಮೂರ್ತಿ, ಶಾಸಕ ಹೆಚ್.ಟಿ. ಮಂಜು, ಮಾಜಿ ಸಚಿವ ನಾರಾಯಣಗೌಡ, ಮಾಜಿ ಶಾಸಕ ಕೆ.ಬಿ. ಚಂದ್ರಶೇಖರ್, ಆ.ಬಿ. ಪ್ರಕಾಶ್, ಆರ್‌ಟಿಓ ಮಲ್ಲಿಕಾರ್ಜುನ್, ಮನ್ಮುಲ್ ನಿರ್ದೇಶಕ ಡಾಲು ರವಿ, ಎಂ.ಬಿ. ಹರೀಶ್, ಕಾಂಗ್ರೆಸ್ ಮುಖಂಡ ವಿಜಯ್ ರಾಮೇಗೌಡ, ಟಿಎಪಿಸಿಎಂಎಸ್ ಅಧ್ಯಕ್ಷ ತೆರ್ನೇನಹಳ್ಳಿ ಬಲದೇವ್, ಮಾಜಿ ಬಿಎಲ್ ದೇವರಾಜು, ಮನ್ಮುಲ್ ಮಾಜಿ ನಿರ್ದೇಶಕ ಎಸ್. ಅಂಬರೀಶ್, ದಲಿತ ಮುಖಂಡ ಬಸ್ತಿ ರಂಗಪ್ಪ, ಪುರಸಭಾ ಸದಸ್ಯ ಡಿ. ಪ್ರೇಂಕುಮಾರ್, ಛಲವಾದಿ ತಾಲ್ಲೂಕು ಅಧ್ಯಕ್ಷ ಊಚನಹಳ್ಳಿ ನಟರಾಜು, ಸಿಂಧಘಟ್ಟ ಸೋಮಸುಂದರ್, ಮಾಂಬಳ್ಳಿ ಜಯರಾಂ, ಹರಿಹರಪುರ ನರಸಿಂಹ, ಟಿಎಪಿಸಿಎಂಎಸ್ ನಿರ್ದೇಶಕ ನಾಗರಘಟ್ಟ ದಿಲೀಪ್ ಕುಮಾರ್, ಆನಗೊಳ ಸೊಸೈಟಿ ಅಧ್ಯಕ್ಷ ಬಿ.ಎಂ. ಕಿರಣ್, ತಾಲ್ಲೂಕು ಬಿಎಸ್ಪಿ ಅಧ್ಯಕ್ಷ ಪ್ರದೀಪ್ ಬಸ್ತಿ, ಗೋವಿಂದರಾಜು, ಗಂಗಾಧರ್, ಚಲುವರಾಜು, ಗಂಜಿಗೆರೆ ಸೊಸೈಟಿ ಅಧ್ಯಕ್ಷ ಕುರುಬಹಳ್ಳಿ ನಾಗೇಶ್ ಸೇರಿದಂತೆ ಅನೇಕ ಗಣ್ಯರು ಕಂಬನಿ ಮಿಡಿದಿದ್ದಾರೆ.

ಅವರ ನಿಧನವು ರಾಜಕೀಯ ಹಾಗೂ ಸಾಮಾಜಿಕ ಕ್ಷೇತ್ರಕ್ಕೆ ತುಂಬಲಾರದ ನಷ್ಟವೆಂದು ಸ್ಥಳೀಯರು ಅಭಿಪ್ರಾಯಪಟ್ಟಿದ್ದಾರೆ. ಶಿವಕುಮಾರ್ ಅವರ ನಿಷ್ಠೆ, ಶಿಸ್ತಿನ ಜೀವನ ಮತ್ತು ಜನಪರ ಧೋರಣೆ ಮುಂದಿನ ಪೀಳಿಗೆಗೆ ಪ್ರೇರಣೆಯಾಗಲಿದೆ ಎಂದು ಶೋಕಸಂದೇಶಗಳಲ್ಲಿ ಹೇಳಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## ಮಹಿಳೆಯ ಖಾಸಗಿ ಫೋಟೋಗಳನ್ನ ಹರಿಬಿಡೋದಾಗಿ ಬ್ಲ್ಯಾಕ್‌ಮೇಲ್



**ಬೆಂಗಳೂರು**: ಮಹಿಳೆಯ ಖಾಸಗಿ ಫೋಟೋಗಳನ್ನ ಹರಿಬಿಡೋದಾಗಿ ಬ್ಲ್ಯಾಕ್ ಮೇಲ್ ಮಾಡಿದ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ಗಂಡನನ್ನು ಕಳೆದುಕೊಂಡ ಮಹಿಳೆಗೆ ಸಹಾಯ ಮಾಡುವ ನೆಪದಲ್ಲಿ ಪರಿಚಯವಾಗಿದ್ದ ವ್ಯಕ್ತಿ, ಆಕೆಯನ್ನು ಲೈಂಗಿಕವಾಗಿ ಬಳಸಿಕೊಂಡು ಅಶ್ಲೀಲವಾಗಿ ನಿಂದಿಸಿ ಖಾಸಗಿ ಫೋಟೋ ವೈರಲ್ ಮಾಡುವುದಾಗಿ ಬೆದರಿಕೆಯೊಡ್ಡಿದ್ದಾನೆ. ಈ ಕುರಿತು ಆರೋಪಿಯ ವಿರುದ್ಧ ಬ್ಯಾಡರಹಳ್ಳಿ ಠಾಣೆಯಲ್ಲಿ ದೂರು ದಾಖಲಾಗಿದೆ.

**ಸಹಾಯದ ಹೆಸರಿನಲ್ಲಿ ಮಹಿಳೆ ಮೇಲೆ ಲೈಂಗಿಕ ದೌರ್ಜನ್ಯ**

ಸಂತ್ರಸ್ತೆ 2021ರಲ್ಲಿ ಪತಿಯನ್ನು ಕಳೆದುಕೊಂಡು ತನ್ನ 4 ವರ್ಷದ ಹೆಣ್ಣು ಮಗುವಿನೊಂದಿಗೆ ಜೀವನ ನಡೆಸುತ್ತಿದ್ದರು. ಪತಿಯ ನಿಧನದ ಬಳಿಕ ಆತ ನೋಡಿಕೊಳ್ಳುತ್ತಿದ್ದ ಗಾರ್ಮೆಂಟ್ಸ್ ಒಂದರ ಜವಾಬ್ದಾರಿ ಹೊತ್ತು ಮುನ್ನಡೆಸುತ್ತಿದ್ದರು. 2025 ರ ಫೆಬ್ರುವರಿಯಲ್ಲಿ ಮಹಿಳೆಯನ್ನು ಚಂದ್ರಶೇಖರ್ ಎಂಬ ವ್ಯಕ್ತಿ ಹಿಂಬಾಲಿಸಿ, ಸಹಾಯ ಮಾಡುವುದಾಗಿ ಹೇಳಿದ್ದ. ಆಕೆ ಎಷ್ಟೇ ನಿರಾಕರಿಸಿದರೂ ಪ್ರತಿದಿನ ಆಕೆಯನ್ನು ಮಾತನಾಡಿಸುತ್ತಾ, ಆಕೆಯ ಸ್ನೇಹ ಸಂಪಾದಿಸಿದ್ದ. ಹೀಗೆ ಮುಂದುವರೆದು, ನನ್ನನ್ನು ಮದುವೆಯಾಗು ಎಂದೂ ಕೇಳಿಕೊಂಡಿದ್ದ.

ಆಕೆ ತನಗೊಂದು ಚಿಕ್ಕ ಮಗುವಿರುವುದಾಗಿ ಹೇಳಿದ್ದರೂ, ನನ್ನನ್ನು ನಿರಾಶೆಗೊಳಿಸಬೇಡ, ಜೊತೆಯಲ್ಲಿಯೇ ಕೆಲಸ ಮಾಡಿಕೊಂಡು ಹೋಗೋಣವೆಂದು ಪುಸಲಾಯಿಸಿ ಮಹಿಳೆಯ ಇಚ್ಛೆಗೆ ವಿರುದ್ಧವಾಗಿ ಹಲವಾರು ಬಾರಿ ಲೈಂಗಿಕ ಕ್ರಿಯೆಗೆ ಬಳಸಿಕೊಂಡಿದ್ದ.

ಮಹಿಳೆಯ ಅಶ್ಲೀಲ ಫೋಟೋಗಳನ್ನು ಗೋಡೆಗೆ ಅಂಟಿಸುವುದಾಗಿ ಬ್ಲ್ಯಾಕ್‌ಮೇಲ್ ಹೀಗಿರುವಾಗ ಒಂದು ದಿನ ಚಂದ್ರಶೇಖರನ ಹೆಂಡತಿಯೆಂದು ಹೇಳಿಕೊಂಡು ಕವಿತಾ ಎನ್ನುವ ಮಹಿಳೆ ಕರೆ ಮಾಡಿ, 'ನೀನು ಯಾರು? ನನ್ನ ಗಂಡನಿಗೂ ನಿನಗೂ ಏನು ಸಂಬಂಧ' ಎಂದು ಗದರಿಸಿದ್ದಳು.ಈ ವಿಷಯ ತಿಳಿದ ಚಂದ್ರಶೇಖರ ತಾನು ಎಲ್ಲವನ್ನೂ ನೋಡಿಕೊಳ್ಳುವುದಾಗಿ ಹೇಳಿ, ಮತ್ತೊಮ್ಮೆ ಈಕೆಯೊಂದಿಗೆ ದೈಹಿಕ ಸಂಪರ್ಕ ಬೆಳೆಸಿದ್ದ. ಇದರಿಂದಾಗಿ ಮಹಿಳೆ ಗರ್ಭಿಣಿಯಾಗಿದ್ದರು. ಈಗಲೇ ಮಗು ಬೇಡವೆಂದು ಹೇಳಿದ ಚಂದ್ರಶೇಖರ, ಆಕೆಗೆ ಮಾತ್ರೆಯೊಂದನ್ನು ತಂದು ಕೊಟ್ಟಿದ್ದ. ಮಾತ್ರೆ ತೆಗೆದುಕೊಂಡ ಮಹಿಳೆಗೆ ಮರುದಿನವೇ ತೀವ್ರ ಹೊಟ್ಟೆ ನೋವಿನೊಂದಿಗೆ ರಕ್ತಸ್ರಾವವೂ ಆಗಿತ್ತು. ಇದನ್ನು ತಿಳಿಸಿದಾಗ ಆರೊಪಿ, ಕವಿತಾ ಮತ್ತು ಸಾಕಮ್ಮ ಎಂಬ ಮಹಿಳೆಯೂ ಸೇರಿ ಮೂವರು ಸಂತ್ರಸ್ತೆಯೊಂದಿಗೆ ಜಗಳವಾಡಿದ್ದರು.

ಮರುದಿನ ಈ ಮೂವರು ಮತ್ತೊಮ್ಮೆ ಗಾರ್ಮೆಂಟ್ಸ್ ಬಳಿ ಬಂದು ಇದೆಲ್ಲದರ ಕುರಿತು ಪೊಲೀಸರಿಗೆ ದೂರು ನೀಡಿದರೆ ಕೊಲೆ ಮಾಡುವುದಾಗಿ ಬೆದರಿಸಿದ್ದರು. ಇದರ ಬಳಿಕ ಚಂದ್ರಶೇಖರ ಮತ್ತೊಮ್ಮೆ ಗಾರ್ಮೆಂಟ್ ಬಳಿ ಬಂದು ಆಕೆಯ ಅಶ್ಲೀಲ ಫೋಟೋಗಳು ತನ್ನ ಬಳಿ ಇರುವುದಾಗಿಯೂ, ಆಕೆ ಪೊಲೀಸರಿಗೆ ದೂರು ನೀಡಿದರೆ ಅವುಗಳನ್ನು ಸಾಮಾಜಿಕ ಜಾಲತಾಣದಲ್ಲಿ ಹರಿಬಿಡುವುದಾಗಿಯೂ ಹೇಳಿದ್ದ. ಅಷ್ಟೇ ಅಲ್ಲದೇ ಆಕೆಗೆ ಜಾತಿ ನಿಂದನೆ ಮಾಡಿ, ಗಾರ್ಮೆಂಟ್ಸ್‌ನ ಗೋಡೆಗಳಿಗೆ ಆಕೆಯ ಅಶ್ಲೀಲ ಫೋಟೋಗಳನ್ನು ಅಂಟಿಸುವುದಾಗಿಯೂ ಬೆದರಿಸಿದ್ದ.

ಇದೆಲ್ಲದರೊಂದಿಗೆ ಕೊಲೆ ಬೆದರಿಕೆಯನ್ನೂ ಹಾಕಿ ಹೋಗಿದ್ದ. ಇದೆಲ್ಲದರಿಂದ ಮಾನಸಿಕವಾಗಿ ಕುಗ್ಗಿದ ಮಹಿಳೆ, ಆರೋಪಿ ಚಂದ್ರಶೇಖರ್,ಕವಿತಾ ಮತ್ತು ಸಾಕಮ್ಮ ಇವರ ವಿರುದ್ಧ ಬ್ಯಾಡರಹಳ್ಳಿ ಠಾಣೆಗೆ ದೂರು ಸಲ್ಲಿಸಿದ್ದಾರೆ.

## ಶಬರಿಮಲೆಯಲ್ಲಿ ಕಳವಾದ ಚಿನ್ನಕ್ಕೂ ಬಳ್ಳಾರಿಗೂ ಲಿಂಕ್



**ಬಳ್ಳಾರಿ**: ಶಬರಿಮಲೆ ಅಯ್ಯಪ್ಪ ದೇವಾಲಯದ ಚಿನ್ನ ಕಳ್ಳತನ ಪ್ರಕರಣ ತನಿಖೆ ವೇಗ ಪಡೆದುಕೊಂಡಿದೆ. 4 ಕೆಜಿ ಚಿನ್ನ ಕಳುವಾದ ಪ್ರಕರಣದಲ್ಲಿ ಕೇರಳ ಎಸ್‌ಐಟಿ ತಂಡವು ಬಳ್ಳಾರಿಯ ರೊದ್ದಂ ಜ್ಯುವೆಲ್ಲರಿ ಮೇಲೆ ದಾಳಿ ನಡೆಸಿದ್ದು, ಚಿನ್ನದಂಗಡಿಯ ಮಾಲೀಕ ಚಿನ್ನ ಖರೀದಿಸಿರುವುದಾಗಿ ಒಪ್ಪಿಕೊಂಡಿದ್ದಾನೆ. ಚಿನ್ನ ಮಾರಾಟ ಮಾಡಿದ ಪೋಟಿ ಉನ್ನಿಕೃಷ್ಣನ್ ಮನೆ ಮೇಲೆ ಶುಕ್ರವಾರ ಎಸ್‌ಐಟಿ ದಾಳಿ ನಡೆಸಿದ್ದು, ಆತನ ಮನೆಯನ್ನು ಪರಿಶೀಲನೆಗೆ ಒಳಪಡಿಸಲಾಗಿದೆ.

**ಬಳ್ಳಾರಿ ಚಿನ್ನದಂಗಡಿ ಮಾಲೀಕ ಹೇಳಿದ್ದೇನು?**

ಬಳ್ಳಾರಿಯ ಚಿನ್ನದ ವ್ಯಾಪಾರಿ ಗೋವರ್ಧನ್ 476 ಗ್ರಾಂ ಚಿನ್ನ ಖರೀದಿಸಿದ್ದಾಗಿ ಒಪ್ಪಿಕೊಂಡಿದ್ದಾನೆ. ಶಬರಿಮಲೆಯಲ್ಲಿ ಕಳ್ಳತನ ಆದ ಚಿನ್ನ ಎನ್ನುವುದು ಗೊತ್ತಿರದ ಕಾರಣ ನಾನು ಚಿನ್ನ ಖರೀದಿ ಮಾಡಿದ್ದೆ.ಕದ್ದಿದ್ದ ಚಿನ್ನ ಎಂದು ಗೊತ್ತಿದ್ದರೆ ಖರೀದಿ ಮಾಡುತ್ತಿರಲಿಲ್ಲ ಎಂದು ಗೋವರ್ಧನ್ ಕೇರಳ ಎಸ್‌ಐಟಿ ಮುಂದೆ ಹೇಳಿಕೊಂಡಿದ್ದಾನೆ . ಇದನ್ನು ಕೇಳಿದ ಅಧಿಕಾರಿಗಳು ಮುಂದೇನಾದರೂ ಅಗತ್ಯವಿದ್ದರೆ ತನಿಖೆಗೆ ಕರೆದಾಗ ಬರಬೇಕಾಗುತ್ತದೆ ಎಂದು ಹೇಳಿ ಹೊರಟಿದ್ದಾರೆ

**ಪೋಟಿ ಉನ್ನಿಕೃಷ್ಣನ್ ನಿವಾಸದ ಮೇಲೆ ದಾಳಿ ನಡೆಸಿದ ಎಸ್‌ಐಟಿ ಅಧಿಕಾರಿಗಳು**

ಈ ಪ್ರಕರಣದಲ್ಲಿ ತಿರುವಾಂಕೂರು ದೇವಸ್ವಂ ಮಂಡಳಿ (ಟಿಡಿಬಿ) ಮಾಜಿ ಅಧಿಕಾರಿ ಬಿ. ಮುರಾರಿ ಬಾಬು ಅವರನ್ನು ಎಸ್‌ಐಟಿ ಬಂಧಿಸಿತ್ತು. ಶಬರಿಮಲೆ ದೇವಸ್ಥಾನದ ಚಿನ್ನದ ದುರುಪಯೋಗ ಮತ್ತು ಉನ್ನಿಕೃಷ್ಣನ್ ಪೊಟ್ಟಿಗೆ ಸಂಬಂಧಿಸಿದ ಚಿನ್ನ ಲೇಪಿಸುವ ಕೆಲಸಗಳಲ್ಲಿನ ಅಕ್ರಮಗಳ ತನಿಖೆಗೆ ಸಂಬಂಧಿಸಿದಂತೆ ಅವರನ್ನು ಬಂಧಿಸಲಾಗಿತ್ತು ಇದೀಗ ಮತ್ತೊಮ್ಮೆ ಶ್ರೀರಾಮ್‌ಪುರ ಪೊಲೀಸರ ಸಹಕಾರದಿಂದ ಆರೋಪಿ ಪೋಟಿ ಉನ್ನಿಕೃಷ್ಣನ್ ನಿವಾಸದ ಮೇಲೆ ನಿನ್ನೆ(ಅ.24) ದಾಳಿ ನಡೆಸಿದ ಎಸ್‌ಐಟಿ ಅಧಿಕಾರಿಗಳು, ಮಹತ್ವದ ದಾಖಲೆಗಳ ಪರಿಶೀಲನೆ ನಡೆಸಿದ್ದಾರೆ.

ದೇವಾಲಯದ ದ್ವಾರಪಾಲಕ ಮೂರ್ತಿಗಳಿಂದ 475 ಗ್ರಾಂ ಚಿನ್ನದ ಪ್ಲೇಟ್ ಕದ್ದ ಆರೋಪ ಎದುರಿಸುತ್ತಿರುವ ಉನ್ನಿಕೃಷ್ಣನ್ ಈಗ ಕೇರಳ ಎಸ್‌ಐಟಿ ವಶದಲ್ಲಿದ್ದಾನೆ. ಕಳುವಾದ ಚಿನ್ನವನ್ನು ಬಳ್ಳಾರಿಯ ಚಿನ್ನದ ವ್ಯಾಪಾರಿ ಗೋವರ್ಧನ್‌ಗೆ ಮಾರಾಟ ಮಾಡಿದ ಆರೋಪ ತನಿಖೆಗೊಳಪಟ್ಟಿದ್ದು, ಬಳ್ಳಾರಿ ಹಾಗೂ ಬೆಂಗಳೂರಿನಲ್ಲಿ ದಾಳಿ ಮುಂದುವರೆದಿದೆ.

## ಬಿ ಖಾತಾದಿಂದ ಎ ಖಾತಾ ಮಾಡುವ ಯೋಜನೆ ಮೂಲಕ ಜನತೆಗೆ ಟೋಪಿ: ಹೆಚ್‌ಡಿಕೆ



**ಬೆಂಗಳೂರು**: ನಗರದಲ್ಲಿನ ಜೆಡಿಎಸ್ (JDS) ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಕೇಂದ್ರ ಸಚಿವ ಎಚ್. ಡಿ. ಕುಮಾರಸ್ವಾಮಿ, ರಾಜ್ಯ ಸರ್ಕಾರದ ಬಿ ಖಾತಾದಿಂದ ಎ ಖಾತಾ ಮಾಡುವ ಯೋಜನೆಗೆ ತೀವ್ರ ಟೀಕೆ ವ್ಯಕ್ತಪಡಿಸಿದ್ದಾರೆ. "ಇದು ಸರ್ಕಾರದ 6ನೇ ಗ್ಯಾರಂಟಿ , ಜನತೆಗೆ ಟೋಪಿ ಹಾಕುವ ಯೋಜನೆ" ಎಂದು ವ್ಯಂಗ್ಯವಾಡಿರುವ ಅವರು, ಈ ಯೋಜನೆಯಿಂದ ಜನರಿಗೆ ಅನುಕೂಲಕ್ಕಿಂತ ಹೊರೆಯೇ ಹೆಚ್ಚಾಗಲಿದೆ ಎಂದು ಹೇಳಿದ್ದಾರೆ.

ಕಾಂಗ್ರೆಸ್ A-ಖಾತಾ B-ಖಾತಾದಲ್ಲಿ ಜನರನ್ನು ಲೂಟಿ ಮಾಡಲು ಮುಂದಾಗಿದ್ದಾರೆ ಎಂದು HDK ಆರೋಪ

ಬೆಂಗಳೂರಿನ ಜೆಡಿಎಸ್ ಕಚೇರಿಯಲ್ಲಿ ಮಾತನಾಡಿರುವ ಅವರು, "ಐದು ಗ್ಯಾರಂಟಿಗಳ ಹೆಸರಿನಲ್ಲಿ ಈಗಾಗಲೇ ರಾಜ್ಯ ಖಜಾನೆ ಖಾಲಿ ಮಾಡಿದ್ದಾರೆ. ಈಗ A-ಖಾತಾ B-ಖಾತಾದಲ್ಲಿ ಲೂಟಿ ಮಾಡಲು ಮುಂದಾಗಿದ್ದಾರೆ. ಬೆಸ್ಕಾಂನಲ್ಲಿ 3-4 ಲಕ್ಷ ಅರ್ಜಿಗಳು ಬಂದಿವೆ ಎಂದು ಹೇಳುತ್ತಾರೆ. ಆದರೆ ಇದರಿಂದ ಜನರಿಗೆ ಯಾವ ಪ್ರಯೋಜನವೂ ಆಗುವುದಿಲ್ಲ. ಸರ್ಕಾರ 5% ಹೆಚ್ಚುವರಿ ಶುಲ್ಕ ಹೇರುತ್ತಿದೆ. ಇದು ಜನರಿಗೆ ಹೊರೆಯಾಗಲಿದೆ" ಎಂದು ಆರೋಪಿಸಿದರು.

ಅವರು ಕಾಂಗ್ರೆಸ್ ಸರ್ಕಾರದ ವಿರುದ್ಧ ಕಿಡಿಕಾರುತ್ತಾ, "ಬಿ ಖಾತಾ ಸಮಸ್ಯೆ 1995ರಿಂದಲೂ ಇದೆ. 1997ರಲ್ಲಿ ಈ ಬಗ್ಗೆ ಆದೇಶ ಹೊರಬಂದಿತ್ತು. ನಮ್ಮ ಆಡಳಿತದಲ್ಲಿ ನಗರಾಭಿವೃದ್ಧಿಗೆ ಹಲವಾರು ಕ್ರಮ ಕೈಗೊಂಡಿದ್ದೇವೆ. 7 ನಗರಸಭೆಗಳನ್ನು 9ಕ್ಕೆ ಏರಿಸಿದ್ದೇವೆ, 68 ವಾರ್ಡ್‌ಗಳನ್ನು 98ಕ್ಕೆ ವಿಸ್ತರಿಸಿದ್ದೇವೆ, 110 ಹಳ್ಳಿಗಳನ್ನು ಬಿಬಿಎಂಪಿಗೆ ಸೇರಿಸಿದ್ದೇವೆ. ಐದು ವರ್ಷಗಳಲ್ಲಿ ಸುಮಾರು ₹25 ಸಾವಿರ ಕೋಟಿ ಅನುದಾನ ತಂದಿದ್ದೆವು." ಎಂದು ಹೇಳಿಕೊಂಡಿದ್ದಾರೆ.

## 7 ವರ್ಷದ ಮಗಳನ್ನು ಉಸಿರುಗಟ್ಟಿಸಿ ಕೊಲೆ ಮಾಡಿದ ಮಲತಂದೆ



**ಬೆಂಗಳೂರು**: ಹೃದಯವಿದ್ರಾವಕ ಘಟನೆಯೊಂದು ಬೆಂಗಳೂರಿನಲ್ಲಿ ಬೆಳಕಿಗೆ ಬಂದಿದೆ. ಸಣ್ಣ ಕುಟುಂಬದ ಒಳಗಿನ ಕಲಹವು ನಿಷ್ಕಲ್ಮಷ ಬಾಲಕಿಯ ಜೀವವನ್ನೇ ಕಸಿದುಕೊಂಡಿದೆ. ಉಸಿರುಗಟ್ಟಿಸಿ 7 ವರ್ಷದ ಬಾಲಕಿಯನ್ನು ಮಲತಂದೆಯೇ ಹತ್ಯೆ ಮಾಡಿದ ದಾರುಣ ಘಟನೆ ನಗರದ ಹೊರವಲಯದ ಕುಂಬಳಗೋಡು ಠಾಣಾ ವ್ಯಾಪ್ತಿಯ ಕನ್ನಿಕಾ ಬಡಾವಣೆಯಲ್ಲಿ ನಡೆದಿದೆ. ಈ ಘಟನೆಯು ಸ್ಥಳೀಯರಲ್ಲಿ ಆಕ್ರೋಶ ಹಾಗೂ ತೀವ್ರ ದುಃಖ ಮೂಡಿಸಿದೆ.

ಮೃತ ಬಾಲಕಿಯನ್ನು ಸಿರಿ (7) ಎಂದು ಗುರುತಿಸಲಾಗಿದೆ. ಆರೋಪಿಯನ್ನು ದರ್ಶನ್ ಎಂದು ಪೊಲೀಸರು ತಿಳಿಸಿದ್ದಾರೆ. ಪ್ರಾಥಮಿಕ ತನಿಖೆಯ ಪ್ರಕಾರ, ಸಿರಿಯ ತಾಯಿ ಮೊದಲ ಪತಿ ಸಾವಿಗೀಡಾದ ನಂತರ ದರ್ಶನ್ ಎಂಬ ವ್ಯಕ್ತಿಯೊಂದಿಗೆ ಎರಡನೇ ವಿವಾಹ ಮಾಡಿಕೊಂಡಿದ್ದರು. ವಿವಾಹ ನಂತರ ಕೆಲವು ವರ್ಷಗಳ ಕಾಲ ಇಬ್ಬರೂ ಕನ್ನಿಕಾ ಬಡಾವಣೆಯಲ್ಲಿ ವಾಸಿಸುತ್ತಿದ್ದರು. ಆದರೆ ಇತ್ತೀಚೆಗೆ ದಂಪತಿಗಳ ನಡುವೆ ವೈಮನಸ್ಯ, ವಾಗ್ವಾದಗಳು ಹೆಚ್ಚಾಗಿದ್ದವು.

ಘಟನೆಯ ದಿನವೂ ದರ್ಶನ್ ಹಾಗೂ ಹೆಂಡತಿಯ ನಡುವೆ ತೀವ್ರ ಜಗಳ ನಡೆದಿದೆ ಎಂದು ನೆರೆಹೊರೆಯವರು ತಿಳಿಸಿದ್ದಾರೆ. ಕೋಪಗೊಂಡ ದರ್ಶನ್, ಹೆಂಡತಿಗೆ ಪಾಠ ಕಲಿಸಬೇಕೆಂಬ ದುಷ್ಟಉದ್ದೇಶದಿಂದ 7 ವರ್ಷದ ಮಗಳಾದ ಸಿರಿಯನ್ನೇ ಬಲಿಪಶುವನ್ನಾಗಿಸಿದ್ದಾನೆ ಎನ್ನಲಾಗಿದೆ. ಆತ ಮಗು ಉಸಿರುಗಟ್ಟಿಸಿ ಕೊಲೆಮಾಡಿದ ನಂತರ ಸ್ಥಳದಿಂದ ಪರಾರಿಯಾಗಿದ್ದಾನೆ.

ಘಟನೆಯ ಬಗ್ಗೆ ತಿಳಿದ ತಕ್ಷಣ ಕುಂಬಳಗೋಡು ಠಾಣಾ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಸಾಕ್ಷ್ಯಾಧಾರ ಸಂಗ್ರಹಿಸಿ ಶವವನ್ನು ವಶಕ್ಕೆ ಪಡೆದು, ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ಕಳುಹಿಸಲಾಗಿದೆ. ಪೊಲೀಸರು ಪ್ರಕರಣ ದಾಖಲಿಸಿಕೊಂಡು ಆರೋಪಿ ದರ್ಶನ್ ಬಂಧನಕ್ಕಾಗಿ ತೀವ್ರ ಶೋಧ ಆರಂಭಿಸಿದ್ದಾರೆ.

ಮಗುವಿನ ಅಕಾಲಿಕ ಸಾವು ಸ್ಥಳೀಯರನ್ನು ತೀವ್ರವಾಗಿ ಕಳವಳಗೊಳಿಸಿದೆ. "ಏಳು ವರ್ಷದ ಬಾಲಕಿಯಂತಹ ನಿಷ್ಕಪಟ ಜೀವವನ್ನು ಕೊಲ್ಲುವುದು ಮಾನವೀಯತೆಯೆ?" ಎಂದು ನಿವಾಸಿಗಳು ಕಳವಳ ವ್ಯಕ್ತಪಡಿಸಿದ್ದಾರೆ. ಈ ಘಟನೆ ಮಾನಸಿಕ ಅಸ್ಥಿರತೆ ಮತ್ತು ಕುಟುಂಬ ಹಿಂಸೆಯ ಪರಿಣಾಮಗಳ ಕುರಿತು ಮತ್ತೆ ಚಿಂತನೆಗೆ ಆಹ್ವಾನ ನೀಡಿದೆ

ಪೊಲೀಸರು ಆರೋಪಿ ಪತ್ತೆಗೆ ವಿವಿಧ ತಂಡಗಳನ್ನು ರಚಿಸಿದ್ದು , ಶೀಘ್ರದಲ್ಲೇ ಬಂಧಿಸುವ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

## ಬಾಲಕಿ ಮೇಲೆ ಅತ್ಯಾಚಾರ, ಅಪ್ರಾಪ್ತೆ ಈಗ ಗರ್ಭಿಣಿ


**ಹಾವೇರಿ:** ಅಪ್ರಾಪ್ತ ಬಾಲಕಿ ಮೇಲೆ ಸಾಮೂಹಿಕ ಅತ್ಯಾಚಾರ ನಡೆದಿರುವ ಘಟನೆ ಹಾವೇರಿ ಜಿಲ್ಲೆ ಹಾನಗಲ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಇನ್‌ಸ್ಟಾಗ್ರಾಂನಲ್ಲಿ ಬಾಲಕಿ ಪರಿಚಯಿಸಿಕೊಂಡಿದ್ದ ಓರ್ವ ಯುವಕ, ತನ್ನಿಬ್ಬರು ಗೆಳೆಯರ ಜೊತೆ ಸೇರಿಕೊಂಡು ಅತ್ಯಾಚಾರ ಎಸಗಿದ್ದಾರೆ. ಉದಯ್ ಕರಿಯಣ್ಣನವರ, ಕಿಶನ್ ವಡ್ಡರ್, ಆಕಾಶ್ ಮಂತಗಿ, ಚಂದ್ರು ಗೊಲ್ಲರ ಎಂಬುವರು ಸೇರಿಕೊಂಡು ಬಾಲಕಿ ಮೇಲೆ ಅತ್ಯಾಚಾರ ಎಸಗಿದ್ದಾರೆ ಎಂದು ತಿಳಿದುಬಂದಿದ್ದು , ಸದ್ಯ ಬಾಲಕಿ ಗರ್ಭಾವತಿಯಾಗಿದ್ದರಿಂದ ಈ ಪ್ರಕರಣ ಬೆಳಕಿಗೆ ಬಂದಿದೆ.

ಪ್ರಮುಖ ಆರೋಪಿ ಉದಯ್ ಇದೇ ಮಾರ್ಚ್ ನಲ್ಲಿ ಇನ್ ಸ್ಟಾಗ್ರಾಂನಲ್ಲಿ ಬಾಲಕಿಯನ್ನು ಪರಿಚಯ ಮಾಡಿಕೊಂಡಿದ್ದ. ಬಳಿಕೆ ಆಕೆಯನ್ನು ಪುಸಲಾಯಿಸಿ ಲೈಂಗಿಕ ದೌರ್ಜನ್ಯ ಎಸಗಿದ್ದಾನೆ. ಬಳಿಕ ಉದಯ್ ಗೆಳೆಯರಾದ ಕಿಶನ್ ವಡ್ಡರ್, ಆಕಾಶ್ ಮಂತಗಿ, ಚಂದ್ರು, ಗೊಲ್ಲರ ಸೇರಿಕೊಂಡು ಏಪ್ರಿಲ್ ತಿಂಗಳಲ್ಲಿ ಬಾಲಕಿ ಮೇಲೆ ಸಾಮೂಹಿಕ ಅತ್ಯಾಚಾರ ಎಸಗಿದ್ದಾರೆ. ಈಗ ಬಾಲಕಿ ಗರ್ಭಿಣಿಯಾಗುತ್ತಿದ್ದಂತೆಯೇ ಈ ಅತ್ಯಾಚಾರ ಪ್ರಕರಣ ಬೆಳಕಿಗೆ ಬಂದಿದೆ. ಈ ಸಂಬಂಧ ಹಾನಗಲ್ ಪೊಲೀಸ್ ಠಾಣೆಯಲ್ಲಿ ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲಾಗಿದ್ದು , ಪೊಲೀಸರು ತನಿಖೆ ನಡೆಸಿದ್ದಾರೆ.

ಮೊದಲು ಉದಯ್ ಎನ್ನುವಾತ ಬಾಲಕಿಯೊಂದಿಗೆ ಪರಿಚಿತನಾಗಿ ಬಳಿಕ ಆಕೆಯನ್ನು ಪುಸಲಾಯಿಸಿ ಲೈಂಗಿಕವಾಗಿ ಬಳಸಿಕೊಂಡಿದ್ದಾನೆ. ಬಳಿಕ ಉದಯ್ ತನ್ನ ಸ್ನೇಹಿತರಿಗೂ ಪರಿಚಿಸಿದ್ದು , ನಂತರ ಎಲ್ಲರೂ ಸೇರಿಕೊಂಡು ಬಾಲಕಿ ಮೇಲೆ ಸಾಮೂಹಿಕ ಅತ್ಯಾಚಾರ ಎಸಗಿದ್ದಾರೆ ಎಂದು ತಿಳಿದುಬಂದಿದೆ. ಈ ಬಗ್ಗೆ ಪೊಲೀಸರು ತನಿಖೆ ಕೈಗೊಂಡಿದ್ದು , ತನಿಖೆಯಲ್ಲಿ ಈ ಪ್ರಕರಣದ ಸತ್ಯಾಸತ್ಯತೆ ಹೊರಬರಲಿದೆ.

ಹೆಣ್ಣು ಮಕ್ಕಳ ರಕ್ಷಣೆಯ ನಿಟ್ಟಿನಲ್ಲಿ ಸರ್ಕಾರ ನಾನಾ ರೀತಿಯ ಕ್ರಮಗಳನ್ನು ಕೈಗೊಳ್ಳುತ್ತಿರುವ ಸಂದರ್ಭದಲ್ಲೇ ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ 10 ಸಾವಿರಕ್ಕೂ ಅಧಿಕ ಅಪ್ರಾಪ್ತ ವಯಸ್ಸಿನ ಹೆಣ್ಣು ಮಕ್ಕಳ ಮೇಲೆ ಅತ್ಯಾಚಾರ ನಡೆದಿದೆ. ರಾಜ್ಯದ ವಿವಿಧ ಪೊಲೀಸ್ ಠಾಣೆಗಳಲ್ಲಿ ದಾಖಲಾದ ಪ್ರಕರಣ ನಾಗರಿಕ ಸಮಾಜದ ಆತಂಕಕ್ಕೆ ಕಾರಣವಾಗಿದೆ.

## ಖಾಸಗಿ ವೀಡಿಯೋ ಇಟ್ಟುಕೊಂಡು ಬ್ಲ್ಯಾಕ್‌ಮೇಲ್‌ಗೆ ಪ್ರಚೋದನೆ



**ಬೆಂಗಳೂರು**: ಕಿರುತೆರೆ ಜಗತ್ತಿನಲ್ಲಿ ಗುರುತಿಸಿಕೊಂಡಿದ್ದ ನಟಿ ಆಶಾ ಜೋಯಿಸ್ ವಿರುದ್ಧ ಗಂಭೀರ ಆರೋಪ ದಾಖಲಾಗಿದೆ. ಸ್ನೇಹಿತೆಯ ಖಾಸಗಿ ವಿಡಿಯೋಗಳನ್ನು ದುರುಪಯೋಗಪಡಿಸಿಕೊಂಡು ಬ್ಲ್ಯಾಕ್‌ಮೇಲ್ ಮಾಡಲು ಪ್ರಚೋದನೆ ನೀಡಿದ ಪ್ರಕರಣದ ಹಿನ್ನೆಲೆಯಲ್ಲಿ ಅವರ ವಿರುದ್ಧ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ. ಆರೋಪದ ಪ್ರಕಾರ, ನಟಿ ಆಶಾ 2 ಕೋಟಿ ರೂಪಾಯಿಗೆ ಬ್ಲ್ಯಾಕ್‌ಮೇಲ್ ಮಾಡಲು ಯತ್ನಿಸಿದ್ದಾರೆಯೆಂಬುದು ಪೀಡಿತೆಯ ದೂರಿನಲ್ಲಿ ಉಲ್ಲೇಖವಾಗಿದೆ

ಪೀಡಿತೆಯಾದ ಪಾರ್ವತಿ (61) ಎಂಬ ಮಹಿಳೆ ಈ ಕುರಿತು ಪೊಲೀಸ್ ಠಾಣೆಯಲ್ಲಿ ಅಧಿಕೃತ ದೂರು ನೀಡಿದ್ದಾರೆ. ಅವರ ಹೇಳಿಕೆ ಪ್ರಕಾರ, ಕೆಲವು ತಿಂಗಳುಗಳ ಹಿಂದೆ ಪಾರ್ವತಿ ಹಾಗೂ ಆಶಾ ಜೋಯಿಸ್ ನಡುವೆ ಪರಿಚಯ ಬೆಳೆದಿತ್ತು. ಆಶಾ ತಾವು ಸೀರಿಯಲ್ ನಟಿ ಎಂದು ಪರಿಚಯಿಸಿಕೊಂಡು ಪಾರ್ವತಿಯ ವಿಶ್ವಾಸವನ್ನು ಗಳಿಸಿದ್ದರು. ಬಳಿಕ ಇಬ್ಬರ ನಡುವೆ ವೈಯಕ್ತಿಕ ಮತ್ತು ಕುಟುಂಬ ಸಂಬಂಧಿತ ಚರ್ಚೆಗಳು ನಡೆದಿದ್ದು, ಪಾರ್ವತಿಯ ವೈಯಕ್ತಿಕ ಮಾಹಿತಿಗಳು, ವಿಡಿಯೋಗಳು ಹಾಗೂ ಆಡಿಯೋ ದಾಖಲೆಗಳು ಆಶಾ ಅವರ ಕೈಗೆ ಸಿಕ್ಕಿದ್ದವು.

ಪಾರ್ವತಿ ತಮ್ಮ ಕೆಲಸದ ಸ್ಥಳದ ಕಂಪನಿ ಮಾಲೀಕರ ಜೊತೆಗೆ ವಿವಾಹವಾಗಿದ್ದರು ಎಂಬ ಮಾಹಿತಿ ತಿಳಿದ ನಂತರ, ಆಶಾ ಅವರು ಅದನ್ನು ಬ್ಲ್ಯಾಕ್‌ಮೇಲ್ ಮಾಡಲು ಉಪಯೋಗಿಸಲು ಯತ್ನಿಸಿದರೆಂದು ದೂರಿನಲ್ಲಿ ಹೇಳಲಾಗಿದೆ. ಆರೋಪದ ಪ್ರಕಾರ, ಆಶಾ ಪಾರ್ವತಿಗೆ ತಮ್ಮ ಪತಿಯನ್ನು ಬ್ಲ್ಯಾಕ್‌ಮೇಲ್ ಮಾಡಿ 2 ಕೋಟಿ ರೂಪಾಯಿ ಹಣ ವಸೂಲಿಸುವಂತೆ ಒತ್ತಡ ಹೇರಿದ್ದರು. ಪಾರ್ವತಿ ಈ ಅನೈತಿಕ ಬೇಡಿಕೆಗೆ ಒಪ್ಪದಿದ್ದಾಗ, ಆಶಾ ಅವರ ಖಾಸಗಿ ವಿಡಿಯೋಗಳು, ವಾಯ್ಸ್‌ರೆಕಾರ್ಡ್ ಹಾಗೂ ಫೋಟೋಗಳನ್ನು ಸಾಮಾಜಿಕ ಮಾಧ್ಯಮಗಳಲ್ಲಿ ಹಂಚುವುದಾಗಿ ಬೆದರಿಕೆ ಹಾಕಿದ್ದಾರೆಂದು ದೂರು ಹೇಳುತ್ತದೆ.

ಆದರೆ ಪಾರ್ವತಿ ಈ ಬೆದರಿಕೆಗೆ ಮಣಿಯದೇ ಪೊಲೀಸರ ಮೊರೆ ಹೋಗಿದ್ದಾರೆ. ಈ ಘಟನೆಯ ಬಳಿಕ ಪಾರ್ವತಿಯ ಖಾಸಗಿ ಚಿತ್ರಗಳು ಹಾಗೂ ವಿಡಿಯೋಗಳು ಅವರ ಪರಿಚಯ ವಲಯದ ಕೆಲವರಿಗೆ ಕಳುಹಿಸಲ್ಪಟ್ಟಿವೆ ಎಂದು ಅವರು ದೂರಿನಲ್ಲಿ ತಿಳಿಸಿದ್ದಾರೆ. ಇದರ ಪರಿಣಾಮವಾಗಿ ಅವರ ವೈಯಕ್ತಿಕ ಜೀವನ ಹಾಗೂ ಘನತೆಗೆ ತೀವ್ರ ಹಾನಿಯಾಗಿದೆ ಎಂದು ಪಾರ್ವತಿ ಆರೋಪಿಸಿದ್ದಾರೆ.

ಪೊಲೀಸರು ಪ್ರಕರಣವನ್ನು ದಾಖಲಿಸಿಕೊಂಡು ತನಿಖೆ ಪ್ರಾರಂಭಿಸಿದ್ದು , ಆಶಾ ಜೋಯಿಸ್ ಅವರ ವಿರುದ್ಧ ಐಟಿ ಕಾಯ್ದೆ (IT Act) ಹಾಗೂ ಸಂಬಂಧಿತ ದಂಡ ವಿಧಿಸುವ ವಿಧಿಗಳಡಿ ಕ್ರಮ ಕೈಗೊಳ್ಳಲಾಗಿದೆ. ಘಟನೆಯ ಹಿನ್ನೆಲೆ ಹಾಗೂ ಆರೋಪಗಳ ಸತ್ಯಾಸತ್ಯತೆ ಕುರಿತು ಪೊಲೀಸರು ಹೆಚ್ಚಿನ ಸಾಕ್ಷ್ಯ ಸಂಗ್ರಹ ಮಾಡುತ್ತಿದ್ದಾರೆ

ಈ ಪ್ರಕರಣ ಕಿರುತೆರೆ ವಲಯದಲ್ಲಿ ಸದ್ದು ಮಾಡಿದ್ದು, ಖಾಸಗಿ ಸಂಬಂಧಗಳ ದುರುಪಯೋಗ ಹಾಗೂ ಸಾಮಾಜಿಕ ಮಾಧ್ಯಮಗಳ ಬಳಕೆಯ ಕುರಿತ ಚರ್ಚೆಗೂ ಕಾರಣವಾಗಿದೆ. ತನಿಖೆ ಪೂರ್ಣಗೊಂಡ ನಂತರ ಘಟನೆಯ ನಿಜಾಸ್ತಿತಿ ಬಹಿರಂಗವಾಗುವ ನಿರೀಕ್ಷೆ ಇದೆ.

## ಬಾತ್‌ರೂಂನಲ್ಲಿ ಗ್ಯಾಸ್ ಗೀಸರ್ ಸೋರಿಕೆ; ಉಸಿರುಗಟ್ಟಿ ಅಕ್ಕ-ತಂಗಿ ಸಾವು





**ಮೈಸೂರು:** ಬಾತ್‌ರೂಂನಲ್ಲಿ ಗ್ಯಾಸ್ ಗೀಸರ್ ಸೋರಿಕೆಯಾದ ಪರಿಣಾಮ ಉಸಿರುಗಟ್ಟಿ ಅಕ್ಕ-ತಂಗಿ ಸಾವನ್ನಪ್ಪಿದ ಘಟನೆ ಮೈಸೂರುಜಿಲ್ಲೆ ಪಿರಿಯಾಪಟ್ಟಣ ತಾಲೂಕಿನ ಬೆಟ್ಟದಪುರ ಗ್ರಾಮದಲ್ಲಿ ನಡೆದಿದೆ.

ಗುಲ್ಫರ್ಮ್ ತಾಜ್ (23), ಸಿಮ್ರಾನ್ ತಾಜ್ (20) ಮೃತ ದುರ್ದೈವಿಗಳು. ಗ್ಯಾಸ್ ಗೀಸರ್‌ನಿಂದ ಕಾರ್ಬನ್ ಮೋನಾಕ್ಸೈಡ್ ಸೋರಿಕೆಯಾಗಿ ಘಟನೆ ಸಂಭವಿಸಿದೆ. ಗುಲ್ಫರ್ಮ್, ಸಿಮ್ರಾನ್ ತಾಜ್ ಇಬ್ಬರೂ ಒಟ್ಟಿಗೆ ಬಾತ್‌ರೂಂಗೆ ಹೋದಾಗ ಘಟನೆ ನಡೆದಿದೆ. ಬಹಳ ಹೊತ್ತು ಕಳೆದರು ಬಾತ್‌ರೂಂನಿಂದ ಅಕ್ಕ , ತಂಗಿ ಹೊರಬಾರದ ಹಿನ್ನೆಲೆ ತಂದೆ ಅಲ್ತಾಫ್ ಅನುಮಾನಗೊಂಡು ಬಾಗಿಲು ಬಡಿದಿದ್ದಾರೆ. ಆಗಲೂ ಬಾಗಿಲು ತೆರೆದಿಲ್ಲ. ಈ ವೇಳೆ ಬಾಗಿಲು ಒಡೆದು ನೋಡಿದಾಗ ಮಕ್ಕಳಿಬ್ಬರು ಅರೆಪ್ರಜ್ಞಾವಸ್ಥೆಯಲ್ಲಿರೋದು ಗೊತ್ತಾಗಿದೆ.

ತಕ್ಷಣವೇ ಮಕ್ಕಳನ್ನು ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಲಾಗಿದೆ. ಆದರೆ ಅಷ್ಟುಹೊತ್ತಿಗಾಗಲೇ ಇಬ್ಬರೂ ಮೃತಪಟ್ಟಿದ್ದರು. ಕೋಣೆಯಲ್ಲಿ ಕಿಟಕಿ ಇರದ ಹಿನ್ನೆಲೆ ಉಸಿರುಗಟ್ಟಿದೆ ಎನ್ನಲಾಗಿದೆ. ಪಿರಿಯಾಪಟ್ಟಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ಸಂಭವಿಸಿದೆ.

## ಟೋಲ್ ಮಾರ್ಗ ತಪ್ಪಿಸಿದ್ದಕ್ಕೆ ಪ್ರಶ್ನಿಸಿದ ವಿದ್ಯಾರ್ಥಿನಿ ಮೇಲೆ ಹಲ್ಲೆ

**ಬೆಂಗಳೂರು**: ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಟೋಲ್ ಮಾರ್ಗ ತಪ್ಪಿಸಿದ ವಿಚಾರವಾಗಿ ಕ್ಯಾಬ್ ಚಾಲಕ ವಿದ್ಯಾರ್ಥಿನಿ ಮೇಲೆ ಹಲ್ಲೆ ನಡೆಸಿದ್ದಾನೆ. 19 ವರ್ಷದ ಕಾಲೇಜು ವಿದ್ಯಾರ್ಥಿನಿಯ ಮೇಲೆ ಹಲ್ಲೆ ನಡೆಸಿದ ಆರೋಪದ ಮೇಲೆ ಕ್ಯಾಬ್ ಚಾಲಕನನ್ನು ಇಂದು ಬಂಧಿಸಲಾಗಿದೆ ಎಂದು ಪೊಲೀಸರು ಹೇಳಿದ್ದಾರೆ. ಅಕ್ಟೋಬರ್ 20 ರಂದು ಈ ಘಟನೆ ನಡೆದಿದೆ. ಆರೋಪಿಯನ್ನು ಕೇರಳದ ತ್ರಿಶೂರ್ ಮೂಲದ ಅಜಾಸ್ ಪಿ.ಎಸ್ (31) ಎಂದು ಗುರುತಿಸಲಾಗಿದ್ದು, ಆತನನ್ನು ವಶಕ್ಕೆ ಪಡೆಯಲಾಗಿದೆ ಎಂದು ಪೊಲೀಸರು ಹೇಳಿದ್ದಾರೆ

ಇನ್ನು ಹಲ್ಲೆಗೊಳಗಾದ ವಿದ್ಯಾರ್ಥಿನಿಯ ಚಿಕ್ಕಪ್ಪ ಈ ಬಗ್ಗೆ ದೂರು ನೀಡಿದ್ದಾರೆ, ಅವರ ದೂರಿನ ಪ್ರಕಾರ, ನಮ್ಮ ಮಗಳು ಪಶ್ಚಿಮ ಬಂಗಾಳದವಳಾಗಿದ್ದು , ಬೆಂಗಳೂರಿನ ಖಾಸಗಿ ವಿಶ್ವವಿದ್ಯಾಲಯದಲ್ಲಿ ಪದವಿ ಪಡೆಯುತ್ತಿರುವ ವಿದ್ಯಾರ್ಥಿನಿ, ಆಕೆ ವಿಮಾನ ನಿಲ್ದಾಣಕ್ಕೆ ಬರಲು ಆನ್‌ಲೈನ್ ಅಗ್ರಿಗೇಟರ್ ಮೂಲಕ ಕ್ಯಾಬ್ ಬುಕ್ ಮಾಡಿದ್ದಾಳೆ. ಕ್ಯಾಬ್ ಡ್ರೈಬರ್‌ಗೆ ಟೋಲ್ ಹಣವನ್ನು ಕೂಡ ಮುಂಚಿತವಾಗಿ ಪೇ ಮಾಡಿದ್ದಾಳೆ.ಅದರೂ ಟೋಲ್‌ತಪ್ಪಿಸಿದ್ದಾನೆ.ಈ ಬಗ್ಗೆ ಆಕೆ ಪ್ರಶ್ನಿಸಿದ್ದು , ಚಾಲಕ ಸರಿಯಾದ ವಿವರಣೆ ನೀಡಿಲ್ಲ ಎಂದು ಕೋಪಗೊಂಡ ವಿದ್ಯಾರ್ಥಿನಿ ಕಾರು ನಿಲ್ಲಿಸುವಂತೆ ಹೇಳಿದ್ದಾಳೆ ಎಂದು ಹೇಳಿದ್ದಾರೆ

ನಂತರ ಇಬ್ಬರ ನಡುವೆ ತೀವ್ರ ವಾಗ್ವಾದ ನಡೆದು, ವಿದ್ಯಾರ್ಥಿನಿ ಕೆಳಗಿಳಿದು ಮತ್ತೊಂದು ಕ್ಯಾಬ್ ಬುಕ್ ಮಾಡಿದ್ದಾಳೆ. ಮತ್ತೊಂದು ಕ್ಯಾಬ್ ಹತ್ತಲು ಮುಂದಾದ ವೇಳೆ ಆತ ವಿದ್ಯಾರ್ಥಿನಿ ಮೇಲೆ ಹಲ್ಲೆ ಮಾಡಿದ್ದಾನೆ. ವಿದ್ಯಾರ್ಥಿನಿ ತನ್ನ ಎಲ್ಲ ವಸ್ತುಗಳನ್ನು ಅಲ್ಲೇ ಬಿಟ್ಟು ಹೋಗಿದ್ದಾಳೆ. ಹಲ್ಲೆ ಮಾಡಿದ ಚಾಲಕ ಸ್ಥಳದಿಂದ ಪರಾರಿಯಾಗಿದ್ದಾನೆ. ದೂರಿನ ಆಧಾರದ ಮೇಲೆ, ಭಾರತೀಯ ನ್ಯಾಯ ಸಂಹಿತಾದ ಸಂಬಂಧಿತ ವಿಭಾಗಗಳ ಅಡಿಯಲ್ಲಿ ಸ್ವಯಂಪ್ರೇರಣೆಯಿಂದ ನೋವುಂಟುಮಾಡುವುದು, ಕ್ರಿಮಿನಲ್ ಬೆದರಿಕೆ ಮತ್ತು ತಪ್ಪು ಸಂಯಮ ಸೇರಿದಂತೆ ಇತರ ವಿಭಾಗಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದ್ದು , ಇದೀಗ ಆತನನ್ನು ಬಂಧಿಸಲಾಗಿದೆ.

ಇದೀಗ ತನಿಖೆಯಲ್ಲಿ ಘಟನೆಯ ಎರಡು ದಿನದ ಮೊದಲು ಚಾಲಕ ಕೇರಳದಿಂದ ಬೆಂಗಳೂರಿಗೆ ಬಂದಿದ್ದನು, ಇನ್ನು ವಿದ್ಯಾರ್ಥಿನಿಯ ಬುಕಿಂಗ್ ಸ್ವೀಕರಿಸಿದಾಗ ಮದ್ಯಪಾನ ಸೇವನೆ ಮಾಡಿದ್ದ ಎಂದು ತನಿಖೆಯಲ್ಲಿ ತಿಳಿಸಿದ್ದಾರೆ.

## ಸಿಲಿಂಡರ್ ಸ್ಫೋಟ – ಮನೆಯೇ ನೆಲಸಮ, ಓರ್ವ ಸಾವು



**ಬೆಂಗಳೂರು**: ಭೀಕರ ಸಿಲಿಂಡರ್ ಸ್ಫೋಟಕ್ಕೆ ಬೃಹತ್ ಕಟ್ಟಡವೇ ನೆಲಸಮಗೊಂಡಿದ್ದು , ಓರ್ವ ಸಾವನ್ನಪ್ಪಿರುವ ಘಟನೆ ಬೆಂಗಳೂರಿನ ಕೆ.ಆರ್ ಪುರಂನ ತ್ರಿವೇಣಿ ನಗರದಲ್ಲಿ ನಡೆದಿದೆ.

ಬೆಳಗ್ಗೆ 7 ಗಂಟೆ ಸುಮಾರಿಗೆ ಘಟನೆ ನಡೆದಿದೆ ಎಂದು ಮೂಲಗಳು ತಿಳಿಸಿವೆ. ಸ್ಫೋಟದ ತೀವ್ರತೆಗೆ ಭಾರೀ ಕಟ್ಟಡವೇ ನೆಲಸಮ ಆಗಿದೆ. ಅಕ್ಕಪಕ್ಕದ ಮನೆಗಳ ಕಿಟಕಿಗಳು ಹಾನಿಯಾಗಿದೆ. ಈ ವೇಳೆ ಮನೆಯಲ್ಲಿದ್ದ ಓರ್ವ ಸಾವನ್ನಪ್ಪಿದ್ದು , ಮೂವರು ಗಂಭೀರ ಗಾಯಗೊಂಡಿದ್ದಾರೆ.

ಸದ್ಯ ಘಟನಾ ಸ್ಥಳಕ್ಕೆ ಕೆ.ಆರ್ ಪುರಂ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ. ಬಾಂಬ್ ಸ್ಕ್ವಾಡ್ ಹಾಗೂ ಡಾಗ್ ಸ್ಕ್ವಾಡ್ ಅಧಿಕಾರಿಗಳಿಂದಲೂ ಸ್ಥಳ ಪರಿಶೀಲನೆ ನಡೆಯುತ್ತಿದೆ. ಸ್ಫೋಟಕ್ಕೆ ಕಾರಣ ಏನೆಂಬುದು ಇನ್ನಷ್ಟೇ ತಿಳಿಯಬೇಕಿದೆ.

## ಆಸ್ಟ್ರೇಲಿಯಾದ ಇಬ್ಬರು ಮಹಿಳಾ ಕ್ರಿಕೆಟಿಗರಿಗೆ ಲೈಂಗಿಕ ಕಿರುಕುಳ

**ಭೋಪಾಲ್**: ಐಸಿಸಿ ಮಹಿಳಾ ಕ್ರಿಕೆಟ್ ವಿಶ್ವಕಪ್‌ನಲ್ಲಿ ಭಾಗವಹಿಸಲು ಆಗಮಿಸಿರುವ ಆಸ್ಟ್ರೇಲಿಯಾದ ಇಬ್ಬರು ಮಹಿಳಾ ಕ್ರಿಕೆಟಿಗರಿಗೆ ಲೈಂಗಿಕ ಕಿರುಕುಳ ನೀಡಿರುವ ಘಟನೆ ಮಧ್ಯಪ್ರದೇಶದ ಇಂದೋರ್‌ನಲ್ಲಿ) ನಡೆದಿದೆ.

ಆರೋಪಿಯನ್ನು ಅಕಿಲ್ ಖಾನ್ ಎಂದು ಗುರುತಿಸಲಾಗಿದ್ದು, ಈ ಹಿಂದೆಯೂ ಆತನ ವಿರುದ್ಧ ಕೆಲವು ಕ್ರಿಮಿನಲ್ ಕೇಸ್‌ಗಳು ದಾಖಲಾಗಿದ್ದವು ಎಂದು ತಿಳಿದುಬಂದಿದೆ.ಕಳೆದ ಗುರುವಾರ (ಅ.23) ಬೆಳಿಗ್ಗೆ ರಾಡಿಸನ್ ಬ್ಲೂ ಹೋಟೆಲ್‌ನಿಂದ ಕೆಫೆಯೊಂದಕ್ಕೆ ತಂಡ ಹೋಗುತ್ತಿದ್ದಾಗ ಖಜ್ರಾನಾ ರಸ್ತೆಯಲ್ಲಿ ಈ ಘಟನೆ ಸಂಭವಿಸಿದೆ. ಮೋಟಾರ್ ಸೈಕಲ್‌ನಲ್ಲಿ ಬಂದ ವ್ಯಕ್ತಿಯೊಬ್ಬ ಇಬ್ಬರು ಕ್ರಿಕೆಟಿಗರನ್ನು ಹಿಂಬಾಲಿಸಿ ಲೈಂಗಿಕ ಕಿರುಕುಳ ನೀಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಬಗ್ಗೆ ಸಬ್‌ಇನ್ಸ್‌ಪೆಕ್ಟರ್ ನಿಧಿ ರಘುವಂಶಿ ಮಾಧ್ಯಮಗಳೊಂದಿಗೆ ಮಾತನಾಡಿ, ಆಸ್ಟ್ರೇಲಿಯಾದ ಇಬ್ಬರು ಮಹಿಳಾ ಕ್ರಿಕೆಟಿಗರು ತಮ್ಮ ಹೋಟೆಲ್‌ನಿಂದ ಹೊರಬಂದು ಕೆಫೆಯ ಕಡೆಗೆ ನಡೆದುಕೊಂಡು ಹೋಗುತ್ತಿದ್ದಾಗ ಮೋಟಾರ್ ಸೈಕಲ್‌ನಲ್ಲಿ ಬಂದ ವ್ಯಕ್ತಿ ಅವರನ್ನು ಹಿಂಬಾಲಿಸಲು ಪ್ರಾರಂಭಿಸಿದ. ಬಳಿಕ ಇಬ್ಬರ ಪೈಕಿ ಒಬ್ಬರಿಗೆ ಅನುಚಿತವಾಗಿ ಮುಟ್ಟಿ ಪರಾರಿಯಾಗಿದ್ದಾನೆ ಎಂದು ಮಾಹಿತಿ ನೀಡಿದ್ದಾರೆ. ಪ್ರತ್ಯಕ್ಷದರ್ಶಿಯೊಬ್ಬರು ಆರೋಪಿಯ ಮೋಟಾರ್ ಸೈಕಲ್‌ನ ಸಂಖ್ಯೆಯನ್ನು ಗಮನಿಸಿದ್ದು , ಅದರ ಆಧಾರದ ಮೇಲೆ ಪೊಲೀಸರು ಆರೋಪಿಯನ್ನು ಬಂಧಿಸಿದ್ದಾರೆ. ಸದ್ಯ ಈ ಪ್ರಕರಣ ಸಂಬಂಧ ತನಿಖೆ ನಡೆಯುತ್ತಿದೆ ಎಂದು ತಿಳಿಸಿದ್ದಾರೆ.

ಘಟನೆ ಬಳಿಕ ಆಟಗಾರರಿಬ್ಬರು ತಮ್ಮ ತಂಡದ ಭದ್ರತಾ ಅಧಿಕಾರಿ ಡ್ಯಾನಿ ಸಿಮನ್ಸ್ ಅವರನ್ನು ಸಂಪರ್ಕಿಸಿದರು. ನಂತರ ಅವರು ಸ್ಥಳೀಯ ಅಧಿಕಾರಿಗಳೊಂದಿಗೆ ಮಾತನಾಡಿದರು. ಮಾಹಿತಿ ತಿಳಿದ ಸಹಾಯಕ ಪೊಲೀಸ್ ಆಯುಕ್ತರು ಆಟಗಾರರನ್ನು ಭೇಟಿಯಾಗಿ, ಅವರ ಹೇಳಿಕೆಗಳನ್ನು ದಾಖಲಿಸಿಕೊಂಡಿದ್ದಾರೆ. ಸದ್ಯ ಭಾರತೀಯ ನ್ಯಾಯ ಸಂಹಿತಾ (BNS) ಸೆಕ್ಷನ್ 74, 78ರ ಅಡಿಯಲ್ಲಿ ಎಂಐಜಿ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಿದೆ. ಆಸ್ಟ್ರೇಲಿಯಾ ಕ್ರಿಕೆಟ್ ತಂಡವು ಕಳೆದ ಒಂದು ವಾರದಿಂದ ಇಂದೋರ್‌ನಲ್ಲಿ ನೆಲೆಸಿದೆ

## ಕಾಮಿಡಿ ಕಿಲಾಡಿಗಳು ಶೋನಿಂದ ರಕ್ಷಿತಾ ಹೊರಗೆ



ಇತ್ತೀಚೆಗಷ್ಟೆ ಜೀ ಕನ್ನಡ ವಾಹಿನಿಯ 'ಕಾಮಿಡಿ ಕಿಲಾಡಿಗಳು' ಶೋನ ಹೊಸ ಪ್ರೋಮೋ ಬಿಡುಗಡೆ ಆಯ್ತು. ಪ್ರೋಮೋನಲ್ಲಿ ಯೋಗರಾಜ್ ಭಟ್, ಜಗ್ಗೇಶ್ ಅವರ ಜೊತೆಗೆ ನಟಿ ತಾರಾ ಸಹ ಕಾಣಿಸಿಕೊಂಡರು. ಕಳೆದ ಕೆಲವಾರು ವರ್ಷಗಳಿಂದಲೂ ಕಾಮಿಡಿ ಕಿಲಾಡಿಗಳು ಶೋಗೆ ನಟಿ ರಕ್ಷಿತಾ ಪ್ರೇಮ್ ಜಡ್ಜ್ ಆಗಿದ್ದರು. ಆದರೆ ಈಗ ಹಠಾತ್ತನೆ ಅವರ ಸ್ಥಾನಕ್ಕೆ ತಾರಾ ಬಂದಿರುವುದು ಅಭಿಮಾನಿಗಳಿಗೆ ಆಶ್ಚರ್ಯ ತಂದಿತ್ತು. ರಕ್ಷಿತಾ ಅವರು 'ಕಾಮಿಡಿ ಕಿಲಾಡಿಗಳು' ಶೋ ಬಿಟ್ಟಿದ್ದೇಕೆ ಎಂಬ ಚರ್ಚೆ ಸಹ ನಡೆದಿತ್ತು. ಇದೀಗ ಆ ಪ್ರಶ್ನೆಗೆ ಉತ್ತರ ಸಿಕ್ಕಿದೆ. ಸ್ವತಃ ರಕ್ಷಿತಾ ಪ್ರೇಮ್, ತಮ್ಮ ಸಾಮಾಜಿಕ ಜಾಲತಾಣದಲ್ಲಿ ಈ ಬಗ್ಗೆ ಬರೆದುಕೊಂಡಿದ್ದಾರೆ.

ಇನ್‌ಸ್ಟಾಗ್ರಾಂನಲ್ಲಿ ಸ್ಟೋರಿ ಹಂಚಿಕೊಂಡಿರುವ ರಕ್ಷಿತಾ ಪ್ರೇಮ್, 'ಸುದ್ದಿ ಹಬ್ಬಿಸುತ್ತಿರುವವರ ಹಾಗೂ ನನ್ನ ಟ್ಯಾಗ್ ಮಾಡಿ ನೀವೇಕೆ ಒಂದು ನಿರ್ದಿಷ್ಟ ಚಾನೆಲ್‌ನ, ಒಂದು ನಿರ್ದಿಷ್ಟ ಶೋನಲ್ಲಿ ಇಲ್ಲ ಎಂದು ಕೇಳುತ್ತಿರುವವರ ಗಮನಕ್ಕಾಗಿ ಈ ಸುದ್ದಿ ಹಂಚಿಕೊಳ್ಳುತ್ತಿದ್ದೇನೆ. ಕಳೆದ ಒಂಬತ್ತು ವರ್ಷಗಳಿಂದಲೂ ಒಂದು ನಿರ್ದಿಷ್ಟ ಚಾನೆಲ್‌ನ, ನಿರ್ದಿಷ್ಟ ಶೋಗಳ ಭಾಗವಾಗಿದ್ದೆ , ಅದಕ್ಕಾಗಿ ಕೆಲಸ ಮಾಡಿದ್ದೆ. ಆದರೆ ನಾನು ಈಗ ಅದರ ಭಾಗವಲ್ಲ' ಎಂದಿದ್ದಾರೆ .'ಜೀವನ ಬದಲಾಗಬೇಕು, ನಾನು ಸಹ ಹೊಸ ಸವಾಲುಗಳನ್ನು ಎದುರುಗೊಳ್ಳಬೇಕು, ಹೊಸದೇನನ್ನಾದರೂ ಪ್ರಯತ್ನಿಸಬೇಕು. ಹಾಗಾಗಿ ಇನ್ನು ಮುಂದೆ ನಾನು ಆ ಡ್ಯಾನ್ಸ್ ಶೋನ ಭಾಗವೂ ಸಹ ಆಗಿರುವುದಿಲ್ಲ. ಆ ಚಾನೆಲ್‌ನ ಭಾಗವೂ ಆಗಿರುವುದಿಲ್ಲ. ಇಷ್ಟು ವರ್ಷ ಜನರು ತೋರಿಸಿರುವ ಪ್ರೀತಿಗೆ ನಾನು ಋಣಿ. ಆದರೆ ಈಗ ಮುಂದುವರೆಯುವುದೇ ಸರಿಯಾದ ಆಯ್ಕೆ , ನಾನು ಮತ್ತೆ ನಿಮ್ಮ ಮುಂದೆ ಬಂದಾಗ ಅದೇ ಪ್ರೀತಿಯನ್ನು ನನ್ನ ಮೇಲೆ ತೋರಿಸುತ್ತೀರಿ ಎಂಬ ವಿಶ್ವಾಸ ಇದೆ' ಎಂದು ರಕ್ಷಿತಾ ಹೇಳಿದ್ದಾರೆ.

ರಕ್ಷಿತಾ 2017 ರಿಂದಲೂ ಕಾಮಿಡಿ ಕಿಲಾಡಿಗಳು ಶೋನ ಜಡ್ಜ್ ಆಗಿದ್ದರು. 'ಕಾಮಿಡಿ ಕಿಲಾಡಿಗಳು' ಶೋನ ಒಟ್ಟು ಐದು ಸೀಸನ್, ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್‌ನ ಆರು ಸೀಸನ್‌ಗೆ ರಕ್ಷಿತಾ ಜಡ್ಜ್ ಆಗಿದ್ದರು. ಎಂಟು ವರ್ಷಗಳ ಬಳಿಕ ಈಗ ಎರಡೂ ಶೋಗಳಿಂದ ರಕ್ಷಿತಾ ಹೊರ ಬಂದಿದ್ದಾರೆ. ಆದರೆ ತಮ್ಮ ಪೋಸ್ಟ್‌ನಲ್ಲಿ ರಕ್ಷಿತಾ ಅವರು ಎರಡೂ ಶೋ ಹಾಗೂ ಚಾನೆಲ್‌ನ ಹೆಸರು ಸಹ ಉಲ್ಲೇಖಿಸದೇ ಇರುವುದು ರಕ್ಷಿತಾ ಅವರು ಅಸಮಾಧಾನದಿಂದಲೇ ಶೋನಿಂದ ಹೊರಗೆ ಬಂದಿದ್ದಾರೆ ಎಂಬ ಸುಳಿವು ನೀಡುತ್ತಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.